ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ

NIMMURU SUDDI

ಸಂಪಾದಕರು: ಸುಂದರ್

Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 234 RNI Number : KNKAN/25/A2770 05-09-2026 Saturday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :234 ರಾಯಚೂರು 05-09-2026 ಶನಿವಾರ ಪುಟ 04 ಬೆಲೆ ರೂ.2/- ಮೊ:8660146563

ತಂತ್ರಜ್ಞಾನ ಅಳವಡಿಸಿಕೊಂಡು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಿ: ಡಾ. ಶರಣಪ್ಪ

ರಾಯಚೂರು,ಸೆ.04-

ಸಮಾಜದಲ್ಲಿ ಪ್ರತಿಯೊಬ್ಬರೂ ಗೌರವಯುತ ಬದುಕು ಸಾಗಿಸಲು ಸ್ವಾವಲಂಬನೆ ಅತ್ಯಗತ್ಯವಾಗಿದ್ದು, ವಿಕಲಚೇತನರು ಮುಖ್ಯವಾಹಿನಿಗೆ ಬರಲು ಬದಲಾದ ಕಾಲಮಾನಕ್ಕೆ ಅನುಗುಣವಾಗಿ ಆಧುನಿಕ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳಬೇಕು ಎಂದು ಮಹಾನಗರ ಪಾಲಿಕೆ ಉಪ ಆಯುಕ್ತ ಡಾ. ಶರಣಪ್ಪ ಹೇಳಿದರು.



ನಗರದಲ್ಲಿ ಸೆಲ್ಕೋ ಫೌಂಡೇಶನ್ ಹಾಗೂ ಸರ್ಕಾರದ ಸಹಯೋಗದಲ್ಲಿ ವಿಕಲಚೇತನರ ಸ್ವಾವಲಂಬನೆಗೆ ನೆರವಾಗುವ ತಂತ್ರಜ್ಞಾನ ಮತ್ತು ವಿವಿಧ ಯೋಜನೆಗಳ ಕುರಿತು ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ವಿಕಲಚೇತನರ ಆರ್ಥಿಕ ಮತ್ತು ಸಾಮಾಜಿಕ ಸಬಲೀಕರಣಕ್ಕೆ ಸರ್ಕಾರ ಹಾಗೂ ವಿವಿಧ ಸಂಸ್ಥೆಗಳು ಹಲವು ಯೋಜನೆಗಳನ್ನು ಜಾರಿಗೊಳಿಸುತ್ತಿವೆ. ಇಂತಹ ಯೋಜನೆಗಳ ಸದುಪಯೋಗ ಪಡೆದುಕೊಂಡು ಸ್ವಾವಲಂಬಿ ಜೀವನ ನಡೆಸಬೇಕು ಎಂದು ಸಲಹೆ ನೀಡಿದರು.

ವಿಕಲಚೇತನರು ಸಣ್ಣ ಸಣ್ಣ ಉದ್ದಿಮೆಗಳನ್ನು ಆರಂಭಿಸುವ ಮೂಲಕ ಆರ್ಥಿಕವಾಗಿ ಸ್ವಾವಲಂಬಿಗಳಾಗುವುದರ ಜೊತೆಗೆ ಸಮಾಜದ ಮುಖ್ಯವಾಹಿನಿಗೆ ಬರಬೇಕು. ಕಡಿಮೆ ವೆಚ್ಚದಲ್ಲಿ ಪರಿಸರ ಸ್ನೇಹಿ ಸೋಲಾರ್ ಆಧಾರಿತ ಉದ್ದಿಮೆಗಳನ್ನು ಆರಂಭಿಸಿ ಉತ್ತಮ ಆದಾಯ ಗಳಿಸುವ ಅವಕಾಶಗಳಿವೆ. ಪ್ರಸ್ತುತ ಬದಲಾಗುತ್ತಿರುವ ತಂತ್ರಜ್ಞಾನಕ್ಕೆ ಅನುಗುಣವಾಗಿ ಹೊಸ ಉದ್ಯಮಗಳನ್ನು ಆಯ್ಕೆ ಮಾಡಿಕೊಂಡು ಮುನ್ನಡೆಯಬೇಕು ಎಂದರು.

ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಚಂದ್ರ ಶೇಖರ್ ಪವಾರ ಮಾತನಾಡಿ, ಸೆಲ್ಕೋ ಫೌಂಡೇಶನ್ ಮಹಿಳೆಯರು ಹಾಗೂ ವಿಕಲಚೇತನರ ಸಬಲೀಕರಣ ಕ್ಕಾಗಿ ಅಗತ್ಯ ಸೌಲಭ್ಯ ಮತ್ತು ನೆರವು ನೀಡುತ್ತಿದೆ. ಅರ್ಹ ಫಲಾನುಭವಿಗಳು ಈ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಹೇಳಿದರು.

ಸೆಲ್ಕೋ ಫೌಂಡೇಶನ್ ಹಾಗೂ ಗ್ರಾಮ ಪಂಚಾಯಿತಿಗಳ ಸಹಯೋಗದಲ್ಲಿ ವಿಕಲಚೇತನರಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸುವ ಕಾರ್ಯ ನಡೆಯುತ್ತಿದೆ. ಇಂತಹ ಯೋಜನೆಗಳ ಮೂಲಕ ವಿಕಲಚೇತನರು ಸ್ವಾವಲಂಬಿ ಜೀವನ ರೂಪಿಸಿಕೊಳ್ಳಲು ಸಾಧ್ಯವಾಗಲಿದೆ ಎಂದರು.

ಕಾರ್ಯಕ್ರಮದಲ್ಲಿ ಡಿಡಿಡ ಬ್ಯೂಒ ಸರಸ್ವತಿ ಎಸ್., ರಾಜ್ಯ ಸಂಯೋಜಕ ನರಸಿಂಹಮೂರ್ತಿ, ಅನಿಲ್ ರಾಥೋಡ್, ಸುರೇಶ್ ಬಂಡಾರಿ, ಹೃತಿಕ್ ಗಾಂಧಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಯಾದಗಿರಿ ಜಿಲ್ಲೆಯನ್ನು ಬರ ಪೀಡಿತ ಪ್ರದೇಶವೆಂದು ಘೋಷಿಸಲು ಒತ್ತಾಯ


ಯಾದಗಿರಿ,ಸೆ.04-

ರಾಜ್ಯ ಸರ್ಕಾರ ಮತ್ತೊಮ್ಮೆ ಪರಿಶೀಲಿಸಿ ಎರಡನೇ ಅವಧಿಯ ಪಟ್ಟಿಯಲ್ಲಿ ಜಿಲ್ಲೆಯನ್ನು ಬರಗಾಲ ಪ್ರದೇಶವೆಂದು ಘೋಷಣೆ ಮಾಡುವಂತೆ ಜಿಲ್ಲಾ ಪಂಚಾಯಿತಿ ಸಾಯಿ ಸಮಿತಿ ಮಾಜಿ ಅಧ್ಯಕ್ಷ ವಿನೋದ್ ಗೌಡ ಮಾಲಿ ಪಾಟೀಲ್ ದೊರನಹಳ್ಳಿ ರಾಜ್ಯ ಸರ್ಕಾರಕ್ಕೆ ಆಗ್ರಹಿಸಿದ್ದಾರೆ.ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ಜಿಲ್ಲೆಯಲ್ಲಿನ ಶಹಾಪುರ ಮತಕ್ಷೇತ್ರ ಒಂದನ್ನೆಮಾತ್ರ ಬರಗಾಲ ಪ್ರದೇಶವೆಂದು ಘೋಷಿಸಿ ಉಳಿದ ತಾಲೂಕುಗಳನ್ನು ಕೈ ಬಿಟ್ಟಿರುವುದು ಮಲತಾಯಿ ಧೋರಣೆ ತೋರಿದಂತಾಗಿದೆ ಇನ್ನುಳಿದ ತಾಲೂಕುಗಳಲ್ಲಿಯೂ ಸಮರ್ಪಕವಾಗಿ ಮುಂಗಾರು ಮಳೆ ಆಗದ ಹಿನ್ನೆಲೆಯಲ್ಲಿ ಹತ್ತಿ,ಹೆಸರು, ತೊಗರಿ, ಇನ್ನಿತರ ಬೆಳೆಗಳು ಸಂಪೂರ್ಣವಾಗಿ ಬಾಡಿ ಹೋಗುತ್ತಿವೆ ಈಗಾಗಲೇ ರೈತರು ಆತಂಕದಲ್ಲಿದ್ದಾರೆ.ಸಾಲಾ ಸುಲಾ ಮಾಡಿ ರೈತರು ದುಬಾರಿ ಬೀಜ ರಸಗೊಬ್ಬರ ಕೀಟನಾಶಕಗಳನ್ನು ಸಿಂಪಡಿಸಿ ದುಬಾರಿ ಹಣವನ್ನು ಈಗಾಗಲೇ ಖರ್ಚು ಮಾಡಿ ತುಂಬಾ ಸಂಕಷ್ಟದಲ್ಲಿದ್ದಾರೆ.ಸರಿಯಾಗಿ ಮಳೆ ಬಾರದ ಕಾರಣ ಬೆಳೆಗಳು ಹಾಳಾಗಿವೆ.ಸರ್ಕಾರ ಈಗಾಗಲೇ ಬೇರೆ ಜಿಲ್ಲೆ ತಾಲೂಕುಗಳನ್ನು ಬರ ಪ್ರದೇಶಗಳೆಂದು ಘೋಷಣೆ ಮಾಡಿದ್ದಾರೆ.ಆದರೆ ನಿನ್ನೊಳಿದ ತಾಲೂಕುಗಳನ್ನು ಕೈ ಬಿಟ್ಟರುವುದು ರೈತರಲ್ಲಿ ಆತಂಕ ಮನೆ ಮಾಡಿದೆ ಈ ಭಾಗದಲ್ಲಿಯೂ ಕೂಡಾ ಬೆಳೆಗಳು ಸಂಪೂರ್ಣವಾಗಿ ಒಣಗಿ ನಿಂತಿವೆ ರೈತರು ತುಂಬಿದ ಬೆಳೆವಿಮೆ ಹಣವನ್ನು ಸಮರ್ಪಕವಾಗಿ ರೈತರಿಗೆ ವಿತರಿಸಲು ಕ್ರಮ ಕೈಗೊಳ್ಳಬೇಕು ಯಾವುದೇ ರೀತಿಯ ಮೋಸವಾಗಬಾರದು ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ರೈತರಿಗೆ ಬೆಂಬಲ ಬೆಲೆ ನಿಗದಿಪಡಿಸಬೇಕು ಈ ಭಾಗದಲ್ಲಿ ನೀರಾವರಿಗೆ ಹೆಚ್ಚಿನ ಆದ್ಯತೆ ನೀಡುಬೇಕು.ಎರಡನೇ ಅವಧಿಯ ಪಟ್ಟಿಯಲ್ಲಾದರೂ ಬರಗಾಲ ಪ್ರದೇಶವೆಂದು ಘೋಷಣೆ ಮಾಡುವಂತೆ ರಾಜ್ಯ ಸರ್ಕಾರಕ್ಕೆ ಜಿಲ್ಲಾ ಪಂಚಾಯಿತಿ ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷ ವಿನೋದ್ ಗೌಡ ಮಾಲಿಪಾಟೀಲ್ ದೋರನಹಳ್ಳಿ ಒತ್ತಯಿಸಿದ್ದಾರೆ.

ರಾಘವೇಂದ್ರ ಸ್ವಾಮಿಗಳ ದರ್ಶನ ಪಡೆದ ರಾಜಾ ವೆಂಕಟಪ್ಪ ನಾಯಕ

ಸಿರವಾರ,ಸೆ.04-

ಮಾನ್ವಿ ವಿಧಾನ ಸಭೆ ಕ್ಷೇತ್ರದ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ಅವರು ಶ್ರೀ ಗುರು ರಾಘವೇಂದ್ರ ಸ್ವಾಮಿಗಳ 355ನೇ ಆರಾಧನಾ ಮಹೋತ್ಸವದ ನಿಮಿತ್ತ ಗುರುವಾರ ಸಂಜೆ ಮಂತ್ರಾಲಯಕ್ಕೆ ಭೇಟಿ ನೀಡಿ ಗುರು ಸಾರ್ವಭೌಮ ಶ್ರೀ ರಾಘವೇಂದ್ರ ಸ್ವಾಮಿಗಳ ದರ್ಶನ ಪಡೆದು ಮಳೆ ಬೆಳೆ ಸುಭೀಕ್ಷವಾಗಿ ಆಗಲಿ, ರೈತರ ಬದುಕು ಸಮೃದ್ಧಿಯಾಗಲಿ ಎಂದು ಗುರು ಸಾರ್ವಭೌಮ ಶ್ರೀ ರಾಘವೇಂದ್ರ ಸ್ವಾಮಿಗಳಲ್ಲಿ ಬೇಡಿಕೊಂಡರು. ಈ ವೇಳೆ ಅವರ ಆಪ್ತ ಕಾರ್ಯದರ್ಶಿ ಸೂಗಯ್ಯ ಸ್ವಾಮಿ ಹಿರೇಮಠ ಗಣದಿನ್ನಿ ಸೇರಿದಂತೆ ಆಪ್ತರು ಇದ್ದರು.



ಕಲಿಕಾ ಸಾಮರ್ಥ್ಯ ಹಾಗೂ ಭವಿಷ್ಯದ ಭರವಸೆ ಹೆಚ್ಚಿಸಲು ವಿದ್ಯಾರ್ಥಿಗಳಿಗೆ 'ಹೊಸದಿಗಂತ' ಕಾರ್ಯಕ್ರಮ ಸಕಾಲಿಕ - ಪ್ರೊ.ಕರಿಗೂಳಿ

ಗಂಗಾವತಿ : ತಾಲೂಕಿನ ಶ್ರೀರಾಮನಗರದ ಸಿಎನ್ಆರ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆಂತರಿಕ ಗುಣಮಟ್ಟ ಭರವಸೆ ಕೋಶ ()



ವತಿಯಿಂದ ಪ್ರಥಮ ವರ್ಷದ ಕಲಾ ಬಿ.ಎ, ಬಿ.ಕಾ, ಮತ್ತು ಬಿ.ಎಸ್ಸಿ. ವಿದ್ಯಾರ್ಥಿಗಳಿಗಾಗಿ ಆಯೋಜಿಸಲಾಗಿದ್ದ 'ಹೊಸದಿಗಂತ' ಅಭಿವೃದ್ಧಿಕರಣ ಕಾರ್ಯಕ್ರಮ-2026 ವಿವಿಧ ಶೈಕ್ಷಣಿಕ ಹಾಗೂ ಕೌಶಲ್ಯಾಭಿವೃದ್ಧಿ ಚಟುವಟಿಕೆಗಳೊಂದಿಗೆ 24-08-2026 ರಿಂದ 04-09-2026 ರ ವರೆಗೆ ಯಶಸ್ವಿಯಾಗಿ ನಡೆಯಿತು. ವಿದ್ಯಾರ್ಥಿಗಳ ಆತ್ಮವಿಶ್ವಾಸವನ್ನು ಹೆಚ್ಚಿಸಲು ಕಾಲೇಜು ಶಿಕ್ಷಣ ಇಲಾಖೆಯ ಆದೇಶದಂತೆ ಆಯೋಜಿಸಲಾದ ಈ ಕಾರ್ಯಕ್ರಮವು ವಿದ್ಯಾರ್ಥಿಗಳನ್ನು ಹೊಸಯುಗಕ್ಕೆ ಹಾಗೂ ನವಭಾರತದ ಭವಿಷ್ಯ ನಿರ್ಮಾಣಕ್ಕೆ ಸಿದ್ದಪಡಿಸಲು ಪೂರಕವಾದ ಕಾರ್ಯಕ್ರಮವಾಗಿದೆ.

ಕಾರ್ಯಕ್ರಮದ ಉದ್ಘಾಟನಾ ಸಮಾರಂಭವು ಆಗಸ್ಟ್ 24, 2026ರಂದು ಜರುಗಿತು. ಕಾಲೇಜಿನ ಪ್ರಾಂಶುಪಾಲರಾದ ಡಾ.ಕರಿಗೂಳಿಯವರು ಕಾರ್ಯಕ್ರಮವನ್ನು ಉದ್ಘಾಟಿಸಿ, ಹೊಸದಾಗಿ ಕಾಲೇಜಿಗೆ ಪ್ರವೇಶ ಪಡೆದ ವಿದ್ಯಾರ್ಥಿಗಳು ಉನ್ನತ ಶಿಕ್ಷಣದ ಅವಕಾಶಗಳನ್ನು ಸಮರ್ಪಕವಾಗಿ ಬಳಸಿಕೊಂಡು ತಮ್ಮ ವ್ಯಕ್ತಿತ್ವ ಹಾಗೂ ವೃತ್ತಿ ಜೀವನವನ್ನು ರೂಪಿಸಿಕೊಳ್ಳಬೇಕು ಎಂದು ಕರೆ ನೀಡಿದರು. ಈ ಅಭಿಮುಖೀಕರಣ ಕಾರ್ಯಕ್ರಮದ 12 ಅವಧಿಯಲ್ಲಿ ವಿದ್ಯಾರ್ಥಿಗಳಿಗೆ ವಿವಿಧ ಉಪಯುಕ್ತ ವಿಷಯಗಳ ಕುರಿತು ಉಪನ್ಯಾಸದ ವಿಶೇಷ ಅಧಿವೇಶನಗಳನ್ನು ಆಯೋಜಿಸಲಾಯಿತು. 21ನೇ ಶತಮಾನದ ಕೌಶಲ್ಯಗಳು, ಸಂವಹನ ಕೌಶಲ್ಯಗಳು, ಡಿಜಿಟಲ್ ಕೌಶಲ್ಯಗಳು, ತಾರ್ಕಿಕ ಸಾಮರ್ಥ್ಯ, ''ನಿಮ್ಮನ್ನು ನೀವು ಅರಿಯಿರಿ'' ಹಾಗೂ ''ಕ್ಯಾಂಪಸ್‌ನಿಂದ ವೃತ್ತಿಜೀವನದತ್ತ'' ಎಂಬ ಸಕಾಲಿಕ ವಿನೂತನ ವಿಷಯಗಳ ಕುರಿತು ಸಂಪನ್ಮೂಲ ವ್ಯಕ್ತಿಗಳು ಹಾಗೂ ಕಾಲೇಜಿನ ತರಬೇತಿ ಪಡೆದ ಎಲ್ಲಾ ಅಧ್ಯಾಪಕರು ಮಾರ್ಗದರ್ಶನ ನೀಡಿದರು.

3 ನೇ ಪುಟಕ್ಕೆ

120 ಖಾಸಗಿ ಶಾಲೆಗಳ ಶಿಕ್ಷಕರಿಗೆ ಶಿಕ್ಷಕ ರತ್ನ ಗೌರವ

ಸೆ.25ರಂದು ರಾಯಚೂರಿನಲ್ಲಿ ಶಿಕ್ಷಕರ ದಿನಾಚರಣೆ; ಐವರು ಗಣ್ಯರಿಗೆ ರುಸ್ಮಾ ಪ್ರಶಸ್ತಿ

ರಾಯಚೂರು,ಸೆ.04-

ರಾಯಚೂರು ತಾಲೂಕು ಖಾಸಗಿ ಅನುದಾನ ರಹಿತ ಶಾಲೆಗಳ ಒಕ್ಕೂಟ (ರುಸ್ಮಾ) ವತಿಯಿಂದ ಸೆ.25 ರಂದು ನಗರದ ರಂಗ ಮಂದಿರದಲ್ಲಿ ಶಿಕ್ಷಕರ ದಿನಾಚರಣೆ ಹಾಗೂ ಶಿಕ್ಷಕ ರತ್ನ ಪ್ರಶಸ್ತಿ ಪ್ರದಾನ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ರುಸ್ಮಾ ಒಕ್ಕೂಟದ ಎನ್. ರಾಮಾಂಜನೇಯಲು ತಿಳಿಸಿದರು.



ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು, ಕಿಲ್ಲೇಬೃಹನ್ಮಠದ ಶ್ರೀ ಷ।।ಬ್ರ।। ಶಾಂತಮಲ್ಲ ಶಿವಾಚಾರ್ಯ ಮಹಾಸ್ವಾಮಿಗಳ ದಿವ್ಯಸಾನ್ನಿಧ್ಯದಲ್ಲಿ ಕಾರ್ಯಕ್ರಮ ನಡೆಯಲಿದ್ದು, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಅಜಯಸಿಂಗ್ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ ಎಂದರು.

ಮಾಜಿ ಸಚಿವ ಎನ್.ಎಸ್. ಬೋಸರಾಜು, ಲೋಕಸಭಾ ಸದಸ್ಯ ಜಿ. ಕುಮಾರ್ ನಾಯಕ್, ರಾಯಚೂರು ಶಾಸಕ ಶಿವರಾಜ ಪಾಟೀಲ, ವಿಧಾನ ಪರಿಷತ್ ಸದಸ್ಯ ವಸಂತಕುಮಾರ, ಗ್ರಾಮಾಂತರ ಶಾಸಕ ಬಸನಗೌಡ ದದ್ದಲ್ ಸೇರಿದಂತೆ ಹಲವು ಗಣ್ಯರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ ಎಂದು ಹೇಳಿದರು.

ಐವರು ಗಣ್ಯರಿಗೆ ರುಸ್ಮಾ ಪ್ರಶಸ್ತಿ: ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಐವರು ಗಣ್ಯರಿಗೆ ಈ ಬಾರಿ ರುಸ್ಮಾ ಪ್ರಶಸ್ತಿ ನೀಡಿ ಗೌರವಿಸಲಾಗುವುದು. ಸಮಾಜಸೇವಾ ಕ್ಷೇತ್ರದಲ್ಲಿ ಉದ್ಯಮಿ ಮಾಚಿಕೊಂಡ ನರಸಿಂಹ, ವೈದ್ಯಕೀಯ ಕ್ಷೇತ್ರದಲ್ಲಿ ಡಾ. ಸಾಯಿಬಾಬ, ಪತ್ರಿಕಾ ರಂಗದಲ್ಲಿ ನಾಗರಾಜ ನಾಗತಿಹಳ್ಳಿ, ಎಂಜಿನಿಯರಿಂಗ್ ಕ್ಷೇತ್ರದಲ್ಲಿ ಶಿವಕುಮಾರ ಹಾಗೂ ನ್ಯಾಯಾಂಗ ಕ್ಷೇತ್ರದಲ್ಲಿ ರಾಯಚೂರು ಜಿಲ್ಲಾ ನ್ಯಾಯವಾದಿಗಳ ಸಂಘದ ಅಧ್ಯಕ್ಷ ಶಿವಶಂಕರ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದರು.

ಪ್ರತಿ ಶಾಲೆಯಿಂದ ಒಬ್ಬ ಶಿಕ್ಷಕ: ರಾಯಚೂರು ತಾಲೂಕಿನಲ್ಲಿ

3 ನೇ ಪುಟಕ್ಕೆ

ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ರಕ್ಷಾ ಬಂಧನ - ಕೃಷ್ಣ ಜನ್ಮಾಷ್ಟಮಿ

ಮನಸ್ಸಿಗೆ ಶಾಂತಿ ನೆಮ್ಮದಿ - ಅಶೋಕ ಪವಾರ

ಸಿರವಾರ,ಸೆ.04-

ಜೀವನದ ಜಂಜಾಟ, ಕೆಲಸದ ಒತ್ತಡದಲ್ಲಿ ನಾವು ಆಧ್ಯಾತ್ಮಿಕ ವಿಷಯದಿಂದ ದೂರ ಹೋಗಿ, ಶಾಂತಿ ನೆಮ್ಮದಿಯನ್ನು ಹಾಳು ಮಾಡಿಕೊಳುತ್ತಿದ್ದೆವೆ, ದಿನದ ಒಂದು ಗಂಟೆ ಇಂತಹ ಶಿಭಿರದಲ್ಲಿ ಪಾಲ್ಗೊಂಡರೆ ಮನಸ್ಸಿ ಗೆ ಶಾಂತಿ ನೆಮ್ಮದಿ ಸಿಗುತ್ತದೆ ಎಂದು ತಹಸೀಲ್ದಾರ ಅಶೋಕಪವಾರ ಹೇಳಿದರು. ಪಟ್ಟಣದ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯದಲ್ಲಿ ಗುರುವಾರ ಸಂಭ್ರಮ ಸಡಗರದಿಂದ ರಕ್ಷಾ ಬಂಧನ ಮತ್ತು ಶ್ರೀಕೃಷ್ಣ ಜನ್ಮಾಷ್ಟಮಿ ಆಚರಿಸಲಾಯಿತು.



ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಕೆಲಸದ ಒತ್ತಡದ ನಿವಾರಣೆ ಗಾಗಿ ಅಧ್ಯಾತ್ಮದತ್ತ ಒಲವನ್ನು ತೋರಿಸಬೇಕು. ಪ್ರತಿಯೊಂದು ಹಂತದಲ್ಲೂ ನೆಮ್ಮದಿ, ಶಾಂತಿಗಾಗಿ ದಾರಿ ತೆರೆಯುತ್ತದೆ, ಕೆಲಸದ ಒತ್ತಡದ ಮಧ್ಯೆ ಬಿಡುವು ಮಾಡಿಕೊಂಡು ಬರುತ್ತೆನೆ ಎಂದರು.

ಗಣ್ಯರಾದ ಜೆ ಶರಣಪ್ಪ ಗೌಡ. ರಕ್ಷಾ ಬಂಧನ ಸೋದರತ್ವ ಭಾವನೆಯ ಹಬ್ಬವಾಗಿದೆ. ರಕ್ಷಣೆಯ ಬಂಧನ ಪರಮಾತ್ಮನ ಜತೆಯಲ್ಲಿ. ಸೌಹರ್ದ ಸಂಬಂಧಗಳು ಮನುಷ್ಯರ ಜೊತೆಯಲ್ಲಿ. ಆ ಸಂಬಂಧ ಬಂಧನವಾಗಿರಬೇಕು. ಜ್ಯೋತಿ ಅಕ್ಕನವರು ನಮ್ಮೂರ ಹೆಣ್ಣು ಮಗಳಾಗಿದ್ದಾಳೆ ಎಂದರು. ಚುಕ್ಕಿ

3 ನೇ ಪುಟಕ್ಕೆ

ಹೊಕ್ರಾಣಿಗೆ ಸಚಿವ ಮುನಿಯಪ್ಪ ಭೇಟಿ: ಅಶ್ವಿನಿ ಕುಟುಂಬಕ್ಕೆ ಸಾಂತ್ವನ


ರಾಯಚೂರು,ಸೆ.04-

ಸಿರವಾರ ತಾಲೂಕಿನ ಹೊಕ್ರಾಣಿ ಗ್ರಾಮದಲ್ಲಿ ಹತ್ಯೆಗೀಡಾದ ಅಶ್ವಿನಿ ಅವರ ಮನೆಗೆ ಸಮಾಜ ಕಲ್ಯಾಣ ಸಚಿವ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್. ಮುನಿಯಪ್ಪ ಶುಕ್ರವಾರ ಭೇಟಿ ನೀಡಿ ಕುಟುಂಬದವರಿಗೆ ಸಾಂತ್ವನ ಹೇಳಿದರು.

ಅಶ್ವಿನಿ ಕುಟುಂಬಕ್ಕೆ ಸರ್ಕಾರದಿಂದ ಅಗತ್ಯ ನೆರವು ಒದಗಿಸಲಾಗುವುದು. ಅಶ್ವಿನಿ ಅವರ ಸಹೋದರನಿಗೆ ಸರ್ಕಾರಿ ನೌಕರಿ ನೀಡಲಾಗುವುದು ಹಾಗೂ ಕುಟುಂಬದ ಜಮೀನಿಗೆ ನೀರಾವರಿ ವ್ಯವಸ್ಥೆ ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ಭರವಸೆ ನೀಡಿದರು.

ಹೊಕ್ರಾಣಿ ಸೇರಿದಂತೆ ಹಿಂದುಳಿದ ಪ್ರದೇಶಗಳಲ್ಲಿ ವಿಶೇಷ ಕಾಳಜಿ ವಹಿಸಿ ಪರಿಸ್ಥಿತಿ ಸುಧಾರಿಸಲು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ತಲುಪುವಂತೆ ನೋಡಿಕೊಳ್ಳಬೇಕು. ಗ್ರಾಮೀಣ ಪ್ರದೇಶಗಳಲ್ಲಿ ವಿವಿಧ ಸಮುದಾಯಗಳ ನಡುವೆ ಉತ್ತಮ ವಾತಾವರಣ ನಿರ್ಮಿಸಲು ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು.







ಅಶಾಂತಿಗೆ ಅವಕಾಶ ಬೇಡ

ಅಶ್ವಿನಿ ಹತ್ಯೆ ಖಂಡಿಸಿ ನಡೆಯುತ್ತಿದ್ದ ಪ್ರತಿಭಟನಾ ಸ್ಥಳಕ್ಕೂ ಸಚಿವರು ಭೇಟಿ ನೀಡಿದರು. ಸಮಾಜದಲ್ಲಿ ದ್ವೇಷ, ಅಸೂಯೆಗಳಿಗೆ ಅವಕಾಶ ನೀಡದೆ ಪ್ರೀತಿ, ವಾತ್ಸಲ್ಯ ಮತ್ತು ಸಾಮರಸ್ಯದಿಂದ ಬದುಕುವ ವಾತಾವರಣ ನಿರ್ಮಿಸಬೇಕು. ಅಶಾಂತಿ ಹಾಗೂ ಕಾನೂನುಬಾಹಿರ ಚಟುವಟಿಕೆಗಳಿಗೆ ಅವಕಾಶ ನೀಡಬಾರದು

3 ನೇ ಪುಟಕ್ಕೆ

ತಂಬಾಕು ಮುಕ್ತ ಸಮಾಜ ನಿರ್ಮಾಣಕ್ಕೆ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಿ: ಡಾ.ಶರಣಪ್ಪ ಎಸ್.ಡಿ.



ಕಲಬುರಗಿ,ಸೆ.04-

ತಂಬಾಕು ಮುಕ್ತ ಸಮಾಜ ಹಾಗೂ ಆರೋಗ್ಯಕರ ಭವಿಷ್ಯ ನಿರ್ಮಾಣಕ್ಕಾಗಿ ಪ್ರತಿಯೊಬ್ಬರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು ಎಂದು ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ., ಐಪಿಎಸ್ ಕರೆ ನೀಡಿದರು.

ನಗರ ಪೊಲೀಸ್ ಆಯುಕ್ತರ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಇಲಾಖೆ, ಜಿಲ್ಲಾ ತಂಬಾಕು ನಿಯಂತ್ರಣ ಕೋಶ, ಗೃಹ ಇಲಾಖೆ ಹಾಗೂ ಕಲಬುರಗಿ ನಗರ ಪೊಲೀಸ್ ಆಯುಕ್ತಾಲಯದ ಸಹಯೋಗದಲ್ಲಿ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಗಾಗಿ ಆಯೋಜಿಸಿದ್ದ ರಾಜ್ಯ ತಿದ್ದುಪಡಿ-2024ರ ನಿಬಂಧನೆಗಳು, 2019 ಹಾಗೂ ಇತರ ಕಾನೂನುಗಳ ಕುರಿತು ಸಂವೇದನಾಶೀಲ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ. ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಶರಣಬಸಪ್ಪ ಕ್ಯಾತನಾಳ್ ಅವರು ಜಂಟಿಯಾಗಿ ಸಸಿಗೆ ನೀರೆರೆಯುವ ಮೂಲಕ ಕಾರ್ಯಾಗಾರಕ್ಕೆ ಚಾಲನೆ ನೀಡಿದರು.

2003ರ ರಾಜ್ಯ ತಿದ್ದುಪಡಿ -2024ರ ಪ್ರಮುಖ ಅಂಶಗಳು, ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಯಂತ್ರಣ, ಅಪ್ರಾಪ್ತ ವಯಸ್ಕರಿಗೆ ತಂಬಾಕು ಉತ್ಪನ್ನಗಳ ಮಾರಾಟದ ಮೇಲಿನ ನಿರ್ಬಂಧ ಹಾಗೂ ತಂಬಾಕು ಉತ್ಪನ್ನಗಳ ಜಾಹೀರಾತು ಮತ್ತು ಪ್ರಚಾರದ ಮೇಲಿನ ನಿಯಂತ್ರಣಗಳ ಕುರಿತು ಅಧಿಕಾರಿಗಳಿಗೆ ಮಾಹಿತಿ ನೀಡಿದರು.

ಅದೇ ರೀತಿ -2019-ಅಡಿಯಲ್ಲಿ ಎಲೆಕ್ಟ್ರಾನಿಕ್ ಸಿಗರೇಟ್‌ಗಳ ಉತ್ಪಾದನೆ, ಆಮದು, ಮಾರಾಟ, ವಿತರಣೆ, ಸಂಗ್ರಹಣೆ ಹಾಗೂ ಜಾಹೀರಾತುಗಳಿಗೆ ಸಂಬಂಧಿಸಿದ ನಿಷೇಧಗಳ ಕುರಿತು ವಿವರಿಸಿದರು.

ಕಲಬುರಗಿ ನಗರದಲ್ಲಿ ಸಾರ್ವಜನಿಕ ಸ್ಥಳಗಳು, ಶಿಕ್ಷಣ ಸಂಸ್ಥೆಗಳ ಆವರಣ ಹಾಗೂ ರಸ್ತೆಗಳಲ್ಲಿ ಧೂಮಪಾನ ಸೇರಿದಂತೆ ಕಾನೂನುಬಾಹಿರ ಚಟುವಟಿಕೆಗಳು ಕಂಡುಬಂದಲ್ಲಿ ನಿಯಮಾನುಸಾರ ಕಟ್ಟುನಿಟ್ಟಿನ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಪೊಲೀಸ್ ಅಧಿಕಾರಿಗಳಿಗೆ ಸೂಚಿಸಿದರು. ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ತಂಬಾಕು, ಗುಟ್ಕಾ ಸೇರಿದಂತೆ ದುಶ್ಚಟಗಳಿಂದ ಯುವಜನತೆ ದೂರವಿರುವಂತೆ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದರು.

ಉತ್ತರ ಕರ್ನಾಟಕ ಭಾಗದಲ್ಲಿ ತಂಬಾಕು ಹಾಗೂ ಗುಟ್ಕಾ ಸೇವನೆಯ ಪ್ರಮಾಣ ಹೆಚ್ಚಿರುವ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆಯ ಸಿಬ್ಬಂದಿಯೂ ಇಂತಹ ದುಶ್ಚಟಗಳಿಂದ ದೂರವಿದ್ದು, ಆರೋಗ್ಯಕರ ಜೀವನ ಶೈಲಿಯನ್ನು ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾಯ್ದೆಯಡಿ ಸಾರ್ವಜನಿಕ ಸ್ಥಳಗಳಲ್ಲಿ ಕಾನೂನು ಉಲ್ಲಂಘನೆ ಕಂಡುಬಂದಲ್ಲಿ ಈ ಹಿಂದೆ ವಿಧಿಸಲಾಗುತ್ತಿದ್ದ 500 ರೂ. ದಂಡದ ಬದಲಾಗಿ ರಾಜ್ಯ ತಿದ್ದುಪಡಿ-2024ರ ಅನ್ವಯ 1,000 ರೂ. ದಂಡ ವಿಧಿಸುವ ಕುರಿತು ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು. ನಗರದಾದ್ಯಂತ ಕಾಯ್ದೆಯ ಕುರಿತು ಜಾಗೃತಿ ಮೂಡಿಸುವ ಪೋಸ್ಟರ್‌ಗಳನ್ನು ಅಳವಡಿಸಿ, ನಿಯಮಿತವಾಗಿ ಕಾರ್ಯಾಚರಣೆ ನಡೆಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ್ದ ನವದೆಹಲಿಯ ವೈಟಲ್ ಸ್ಟ್ರಾಟಜಿ ಸಂಸ್ಥೆಯ ಉಪ ನಿರ್ದೇಶಕ ಡಾ. ಅಮಿತ್ ಯಾದವ್ ಅವರು 2003ರ ರಾಜ್ಯ ತಿದ್ದುಪಡಿ -024ರ ಪ್ರಮುಖ ಅಂಶಗಳು, ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಯಂತ್ರಣ, ಅಪ್ರಾಪ್ತರಿಗೆ ತಂಬಾಕು ಉತ್ಪನ್ನಗಳ ಮಾರಾಟದ ನಿರ್ಬಂಧ ಹಾಗೂ ತಂಬಾಕು ಉತ್ಪನ್ನಗಳ ಜಾಹೀರಾತು ಮತ್ತು ಪ್ರಚಾರದ ಮೇಲಿನ ನಿಯಂತ್ರಣಗಳ ಕುರಿತು ವಿವರಿಸಿದರು.

ಎಸ್‌ಎಸ್‌ಎಲ್ ಕಾನೂನು ಕಾಲೇಜಿನ ಪ್ರಾಂಶುಪಾಲರಾದ ಡಾ. ಮಹೇಶ್ವರಿ ಹಿರೇಮಠ್ ಹಾಗೂ ರಾಜ್ಯ ತಂಬಾಕು ನಿಯಂತ್ರಣ ಕೋಶ, ಬೆಂಗಳೂರಿನ ವಿಭಾಗೀಯ ಸಂಯೋಜಕ ಮಹಾಂತೇಶ ಉಳ್ಳಾಗಡ್ಡಿ ಅವರು ಕಾಯ್ದೆಯಡಿ ಸಾರ್ವಜನಿಕ ಆರೋಗ್ಯ ರಕ್ಷಣೆಗೆ ಜಾರಿಗೊಳಿಸಲಾಗಿರುವ ಪ್ರಮುಖ ಕಾನೂನು ನಿಯಮಗಳು ಹಾಗೂ ಅವುಗಳ ಅನುಷ್ಠಾನದ ಕುರಿತು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಕಾಯ್ದೆಯಡಿ ಸಾರ್ವಜನಿಕ ಸ್ಥಳಗಳಲ್ಲಿ ದಂಡ ವಿಧಿಸುವ ಕುರಿತು ಹಾಗೂ ತಂಬಾಕು ವಿರೋಧಿ ಜಾಗೃತಿ ಮೂಡಿಸುವ ಪೋಸ್ಟರ್‌ಗಳನ್ನು ಬಿಡುಗಡೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಡಿಸಿಪಿ ಶಾಲೂ ವೇದಿಕೆಯ ಮೇಲಿದ್ದರು.

ಕಾರ್ಯಾಗಾರದಲ್ಲಿ ಕಲಬುರಗಿ ನಗರ ಪೊಲೀಸ್ ಆಯುಕ್ತರ ಕಚೇರಿಯ ಹಿರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿ, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರರಾದ ಸುಜಾತಾ ಪಾಟೀಲ, ಸಮಾಜ ಕಾರ್ಯಕರ್ತೆ ಆರತಿ ಧನಶ್ರೀ, ಸೈಕಾಲಜಿಸ್ಟ್‌ಹಾಗೂ ಕೌನ್ಸಿ ಲರ್ ಮಂಜುನಾಥ ಕಂಬಾಳಿಮಠ, ಗಣಕಯಂತ್ರ ಸಹಾಯಕ ರವಿಕುಮಾರ್ ಪೂಜಾರಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಚಿಂಚೋಳಿ ಸರ್ಕಾರಿ ಶಾಲೆ ಮಕ್ಕಳಿಗೆ ಉಚಿತ ಶೂ-ಸಾಕ್ಸ್ ವಿತರಣೆ



ಚಿಂಚೋಳಿ,ಸೆ.04-

ತಾಲೂಕಿನ ಸುಲೇಪೇಟ ಗ್ರಾಮದ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ (ಕೆಪಿಎಸ್) ವಿದ್ಯಾರ್ಥಿಗಳಿಗೆ ಸರ್ಕಾರದ ವತಿಯಿಂದ ಉಚಿತವಾಗಿ ಶೂ-ಸಾಕ್ಸ್ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಎಸ್ಡಿಎಂಸಿ ಉಪಾಧ್ಯಕ್ಷ ಜಹಿರೋದ್ದಿನ್ ಪಟೇಲ್ ಅವರು ವಿದ್ಯಾರ್ಥಿಗಳಿಗೆ ಶೂ-ಸಾಕ್ಸ್ ವಿತರಿಸಿ ಮಾತನಾಡಿ, ಸರ್ಕಾರಿ ಶಾಲೆಗಳ ಮಕ್ಕಳಿಗೆ ಶೈಕ್ಷಣಿಕ ಸೌಲಭ್ಯಗಳ ಜತೆಗೆ ಅಗತ್ಯವಾದ ಪಾದರಕ್ಷೆಗಳನ್ನು ಉಚಿತವಾಗಿ ಒದಗಿಸುತ್ತಿರುವುದು ಸ್ವಾಗತಾರ್ಹ. ಇದರಿಂದ ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳ ಮಕ್ಕಳಿಗೆ ಆರ್ಥಿಕ ನೆರವಾಗುವುದರ ಜತೆಗೆ, ವಿದ್ಯಾರ್ಥಿಗಳಲ್ಲಿ ಸಮಾನತೆ, ಶಿಸ್ತು ಹಾಗೂ ಆತ್ಮವಿಶ್ವಾಸ ಬೆಳೆಸಲು ಸಹಕಾರಿಯಾಗಲಿದೆ ಎಂದು ಹೇಳಿದರು.

ಮಕ್ಕಳು ಸರ್ಕಾರ ನೀಡುತ್ತಿರುವ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಉತ್ತಮವಾಗಿ ವಿದ್ಯಾಭ್ಯಾಸ ಮಾಡಬೇಕು. ಶಿಕ್ಷಣದ ಮೂಲಕ ಉತ್ತಮ ಭವಿಷ್ಯ ರೂಪಿಸಿಕೊಳ್ಳುವತ್ತ ವಿದ್ಯಾರ್ಥಿಗಳು ಗಮನಹರಿಸಬೇಕು ಎಂದು ಸಲಹೆ ನೀಡಿದರು.

ಸರ್ಕಾರಿ ಶಾಲೆಗಳಲ್ಲಿ ಮಕ್ಕಳಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸುವ ಮೂಲಕ ಶಿಕ್ಷಣದ ಗುಣಮಟ್ಟ ಹಾಗೂ ದಾಖಲಾತಿ ಹೆಚ್ಚಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತಿದೆ. 202627ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳಿಗೆ ಶೂಸಾಕ್ಸ್ ಸೇರಿದಂತೆ ವಿವಿಧ ಸೌಲಭ್ಯಗಳನ್ನು ನೀಡಲಾಗುತ್ತಿದ್ದು, ಮಕ್ಕಳು ಅವುಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಎಸ್ಡಿಎಂಸಿ ಸದಸ್ಯ ಫಯಾಜ್, ಮುಗು ಸರುಬಾಯಿ, ಉಪನ್ಯಾಸಕ ಜಗನ್ನಾಥ ಕೆ., ಅನುರಾಧ, ರಮೇಶ ಶೇಳಗಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಆರೋಗ್ಯ ಜಾಗೃತಿಗೆ ದಿ ವೆಲ್‌ನೆಸ್ ರೆವಲ್ಯೂಷನ್ 5ನೇ ಸಂಚಿಕೆ ಬಿಡುಗಡೆ



ಕಲಬುರಗಿ,ಸೆ.04-

ಕಲ್ಯಾಣ ಕರ್ನಾಟಕ ಭಾಗದ ಜನರಲ್ಲಿ ಆರೋಗ್ಯ, ಕ್ಷೇಮ, ಯೋಗ ಹಾಗೂ ಸದೃಢ ಜೀವನಶೈಲಿಯ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ನಗರದ ಮಣೂರ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆ ವತಿಯಿಂದ ಪ್ರಕಟಿಸಲಾಗುತ್ತಿರುವ ದಿ ವೆಲ್‌ನೆಸ್ ರೆವಲ್ಯೂಷನ್ ಆರೋಗ್ಯ ಮತ್ತು ಕ್ಷೇಮ ಮ್ಯಾಗಝೀನ್‌ನ 5ನೇ ಸಂಚಿಕೆಯನ್ನು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಪಾಟೀಲ್ ಅವರು ಮಣೂರ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಲೋಕಾರ್ಪಣೆ ಗೊಳಿಸಿದರು.

ಮ್ಯಾಗಝೀನ್ ವೀಕ್ಷಿಸಿದ ಸಚಿವ ಡಾ. ಶರಣಪ್ರಕಾಶ ಪಾಟೀಲ್ ಅವರು, ಆರೋಗ್ಯ ಹಾಗೂ ಕ್ಷೇಮದ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಮಣೂರ ಆಸ್ಪತ್ರೆ ಕೈಗೊಂಡಿರುವ ಪ್ರಯತ್ನಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮಣೂರ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯ ಮುಖ್ಯಸ್ಥ ಡಾ. ಫಾರುಕ್ ಅಹ್ಮದ್ ಮಣೂರ, ಕಲ್ಯಾಣ ಕರ್ನಾಟಕ ಭಾಗದ ಜನರಲ್ಲಿ ಆರೋಗ್ಯದ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಕಳೆದ ಐದು ವರ್ಷಗಳಿಂದ ಆಸ್ಪತ್ರೆಯ ತಂಡ ನಿರಂತರವಾಗಿ ವಿವಿಧ ಕಾರ್ಯ ಕ್ರಮಗಳನ್ನು ಹಮ್ಮಿಕೊಂಡು ಬರುತ್ತಿದೆ. ಉಚಿತ ಆರೋಗ್ಯ ತಪಾಸಣಾ ಶಿಬಿರಗಳು, ಟ್ರಾಮಾ ಡೇ ಸೇರಿದಂತೆ ವಿವಿಧ ಆರೋಗ್ಯ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಜನರಲ್ಲಿ ಆರೋಗ್ಯದ ಬಗ್ಗೆ ಅರಿವು ಮೂಡಿಸಲಾಗುತ್ತಿದೆ ಎಂದರು.

ಇದರ ಮುಂದುವರಿದ ಭಾಗವಾಗಿ ಜನರಿಗೆ ಆರೋಗ್ಯ, ಕ್ಷೇಮ, ಯೋಗ ಹಾಗೂ ದೈಹಿಕ-ಮಾನಸಿಕ ಸದೃಢತೆಯ ಕುರಿತು ಮತ್ತಷ್ಟು ಮಾಹಿತಿ ಮತ್ತು ಜಾಗೃತಿ ಮೂಡಿಸುವ ಉದ್ದೇಶದಿಂದ ದಿ ವೆಲ್‌ನೆಸ್ ರೆವಲ್ಯೂಷನ್ ಮ್ಯಾಗಝೀನ್ ಪ್ರಕಟಿಸಲಾಗುತ್ತಿದೆ. ಕಲ್ಯಾಣ ಕರ್ನಾಟಕ ಭಾಗದಲ್ಲಿ ಆರೋಗ್ಯ ಮತ್ತು ಕ್ಷೇಮದ ಕುರಿತು ಪ್ರಕಟವಾಗುತ್ತಿರುವ ಪ್ರಪ್ರಥಮ ಮ್ಯಾಗಝೀನ್ ಇದಾಗಿದ್ದು, ಇದೀಗ 5ನೇ ಸಂಚಿಕೆ ಬಿಡುಗಡೆಯಾಗಿದೆ. ಮ್ಯಾಗಝೀನ್‌ನ್ನು ಕಲ್ಯಾಣ ಕರ್ನಾಟಕದ ಪ್ರತಿಯೊಂದು ತಾಲೂಕಿಗೂ ಉಚಿತವಾಗಿ ವಿತರಿಸಲಾಗುತ್ತಿದೆ ಎಂದು ಡಾ. ಫಾರುಕ್ ಅಹ್ಮದ್ ಮಣೂರ ತಿಳಿಸಿದರು.

ಜೇವರ್ಗಿ, ಯಡ್ರಾಮಿಯನ್ನು ಬರಗಾಲ ಪ್ರದೇಶವೆಂದು ಘೋಷಿಸಿ ಎಕರೆಗೆ 50 ಸಾವಿರ ರೂ. ಪರಿಹಾರ ನೀಡಿ: ಶಿವರಾಜ ಪಾಟೀಲ



ಜೇವರ್ಗಿ,ಸೆ.04-

ಜೇವರ್ಗಿ ಹಾಗೂ ಯಡ್ರಾಮಿ ತಾಲೂಕುಗಳನ್ನು ಬರಗಾಲ ಪೀಡಿತ ಪ್ರದೇಶಗಳೆಂದು ಘೋಷಿಸಿ, ಮಧ್ಯಂತರ ಪರಿಹಾರವಾಗಿ ಪ್ರತಿ ಎಕರೆಗೆ 50 ಸಾವಿರ ರೂ. ನೀಡಬೇಕು ಎಂದು ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಶಿವರಾಜ ಪಾಟೀಲ ರದ್ದೇವಾಡಗಿ ಆಗ್ರಹಿಸಿದರು.

ಜೇವರ್ಗಿ ಬಿಜೆಪಿ ಮಂಡಲ ವತಿಯಿಂದ ಗುರುವಾರ ಹಮ್ಮಿಕೊಂಡಿದ್ದ ಬೃಹತ್ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ಈ ವರ್ಷ ಸಮರ್ಪಕ ಮಳೆಯಾಗದೆ ರೈತರು ಸಂಕಷ್ಟದಲ್ಲಿದ್ದಾರೆ. ಇಂತಹ ಸಂದರ್ಭದಲ್ಲಿ ಸಚಿವರಾಗಿರುವ ಡಾ. ಅಜಯಸಿಂಗ್ ಅವರು ರೈತರ ಪರವಾಗಿ ಬರಗಾಲ ಘೋಷಣೆ ಮಾಡಿಸುವ ಬದಲು ಅದ್ದೂರಿ ಮೆರವಣಿಗೆಯಲ್ಲಿ ತೊಡಗಿರುವುದು, ಅವರಿಗೆ ಅಧಿಕಾರವೇ ಮುಖ್ಯವಾಗಿದ್ದು ರೈತರ ಹಿತ ಮುಖ್ಯವಲ್ಲ ಎಂಬುದನ್ನು ತೋರಿಸುತ್ತದೆ ಎಂದು ಆರೋಪಿಸಿದರು.

ರೈತರ ನೋವಿಗೆ ಸ್ಪಂದಿಸದ ಸಚಿವರಿಗೆ ರೈತರ ಶಾಪ 2028ರ ಚುನಾವಣೆಯಲ್ಲಿ ತಟ್ಟಲಿದೆ. ರೈತರು ತಕ್ಕ ಪಾಠ ಕಲಿಸಲಿದ್ದಾರೆ ಎಂದು ಸಚಿವರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಜೇವರ್ಗಿ ತಾಲೂಕಿನಲ್ಲಿ ವಿದ್ಯಾರ್ಥಿಗಳಿಗೆ ಶಿಕ್ಷಣ ಪಡೆಯಲು ಅಗತ್ಯವಾದ ಶಿಕ್ಷಣ ಸಂಸ್ಥೆಗಳು ಹಾಗೂ ಸಮರ್ಪಕ ವಸತಿ ನಿಲಯಗಳ ಕೊರತೆಯಿಂದ ಅನೇಕ ವಿದ್ಯಾರ್ಥಿಗಳು ಸಮಸ್ಯೆ ಎದುರಿಸುತ್ತಿದ್ದಾರೆ. ಕ್ಷೇತ್ರದ ಅಭಿವೃದ್ಧಿಯ ಬಗ್ಗೆಯೂ ಸಚಿವರು ಕಾಳಜಿ ವಹಿಸುತ್ತಿಲ್ಲ ಎಂದು ಆರೋಪಿಸಿದರು. ಅಭಿವೃದ್ಧಿಯ ಹೆಸರಿನಲ್ಲಿ ಲ್ಯಾಂಡ್ ಆರ್ಮಿ ಮೂಲಕ ಕೋಟ್ಯಂತರ ರೂಪಾಯಿ ಲೂಟಿ ಮಾಡಲಾಗುತ್ತಿದೆ ಎಂಬ ಗಂಭೀರ ಆರೋಪವನ್ನೂ ಮಾಡಿದರು. ಪಿಡಬ್ಲ್ಯುಡಿ ಸೇರಿದಂತೆ ವಿವಿಧ ಇಲಾಖೆಗಳ ಅಭಿವೃದ್ಧಿ ಕಾಮಗಾರಿಗಳ ಟೆಂಡರ್ ಪ್ರಕ್ರಿಯೆಯಲ್ಲಿಯೂ ಗೋಲ್‌ಮಾಲ್ ನಡೆಸಿ ಹಣ ಲೂಟಿ ಮಾಡಲಾಗುತ್ತಿದೆ ಎಂದು ದೂರಿದರು.

ಸೆ.15ರೊಳಗೆ ಜೇವರ್ಗಿ ಹಾಗೂ ಯಡ್ರಾಮಿ ತಾಲೂಕುಗಳನ್ನು ಬರಗಾಲ ಪೀಡಿತ ಪ್ರದೇಶಗಳೆಂದು ಘೋಷಿಸಿ, ಪ್ರತಿ ಎಕರೆಗೆ 50 ಸಾವಿರ ರೂ. ಮಧ್ಯಂತರ ಪರಿಹಾರ ನೀಡಬೇಕು. ಬೆಳೆ ವಿಮೆಯಿಂದ ವಂಚಿತರಾದ ರೈತರಿಗೆ ತಕ್ಷಣ ವಿಮಾ ಮೊತ್ತ ಬಿಡುಗಡೆ ಮಾಡಬೇಕು, ರೈತರ ಸಾಲ ಮನ್ನಾ ಮಾಡಬೇಕು ಹಾಗೂ ಜಾನುವಾರುಗಳಿಗೆ ಮೇವಿನ ವ್ಯವಸ್ಥೆ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ತಮ್ಮ ಬೇಡಿಕೆಗಳನ್ನು ಈಡೇರಿಸದಿದ್ದರೆ ಮುಂದಿನ ದಿನಗಳಲ್ಲಿ ಬಿಜೆಪಿ ವತಿಯಿಂದ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿ, ತಹಸೀಲ್ದಾರ್ ಅಂಜುಮ ತಬಸುಮ ಅವರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ತಾಲೂಕು ಅಧ್ಯಕ್ಷ ದೇವಿಂದ್ರ ಮುತ್ತಕೋಡ, ಮಲ್ಲಿನಾಥಗೌಡ ಯಲಗೋಡ, ಶೋಭಾ ಭಾಣಿ, ಮರೆಪ್ಪ ಬಡಿಗೇರ, ರೇವಣಸಿದ್ದಪ್ಪ ಸಂಕಾಲಿ, ಮಲ್ಲಣ್ಣಗೌಡ ಪಾಟೀಲ ರದ್ದೇವಾಡಗಿ, ನಿಂಗಣ್ಣ ದೊಡಮನಿ, ಹಣಮಂತ್ರಾಯ ಹೂಗಾರ, ಬಾಪುಗೌಡ ಪಾಟೀಲ ಬಿರಾಳ, ಗುರುರಾಜ ನರಿಬೋಳ, ಭೀಮಾಶಂಕರ ಕುರಡೇಕರ್ ಭಾಗಪ್ಪ ಯಲಗೋಡ, ಶಿವಪುತ್ರ ಕೋಣೆನ್, ಮಲ್ಲಣ್ಣ ಕುಲಕರ್ಣಿ, ಸಿದ್ದು ದ್ಯಾಮ, ಗುಂಡು ಸಾಹುಗೋಗಿ, ರಾಜಶೇಖರ ಗೌನಳ್ಳಿ, ವಿಶ್ವರಾಧ್ಯ ಬಡಿಗೇರ, ತಿಪ್ಪಣ್ಣ ರಾಠೋಡ, ಸಂತೋಷ ಮಲ್ಲಾಬಾದ, ರಾಜು ರದ್ದೇವಾಡಗಿ, ಹಣಮಂತ ಶಾಬಾದಿ, ಖಯುಮ್ ಜಮದಾರ್ ಬಾಬಾ ಪಟೇಲ್, ಈಶ್ವರ ಹಿಪ್ಪರಗಿ, ನಿಂಗಣ್ಣ ರದ್ದೇವಾಡಗಿ, ಅನಿಲಕುಮಾರ ದೊಡಮನಿ, ವಿಶ್ವ ಆಲೂರ, ಬಸವರಾಜ ಮದ್ರಕಿ, ಶ್ರೀಕಾಂತ ಬಡಿಗೇರ ಆಂದೊಲ, ಸಂತೋಷ ಕಟ್ಟಿಮನಿ, ಎಂ ಡಿ ಸಮೀರ್ ಸೇರಿದಂತೆ ಇತರರು ಇದ್ದರು.

ಯುವತಿಯ ಅತ್ಯಾಚಾರ-ಕೊಲೆ ಪ್ರಕರಣ: ನಿಷ್ಪಕ್ಷಪಾತ ತನಿಖೆಗೆ ದಲಿತ ಸಂಘರ್ಷ ಸಮಿತಿ ಆಗ್ರಹ



ಕಲಬುರಗಿ,ಸೆ.04-

ರಾಯಚೂರು ಜಿಲ್ಲೆಯ ಸಿರವಾರ ತಾಲೂಕಿನ ಹೊಕ್ಕರಣಿ ಗ್ರಾಮದ ಯುವತಿ ಮೇಲೆ ನಡೆದ ಸಾಮೂಹಿಕ ಅತ್ಯಾಚಾರ ಹಾಗೂ ಕೊಲೆ ಪ್ರಕರಣವನ್ನು ನಿಷ್ಪಕ್ಷಪಾತವಾಗಿ ತನಿಖೆ ನಡೆಸಿ, ತಪ್ಪಿತಸ್ಥರಿಗೆ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ (ಕ್ರಾಂತಿಕಾರಿ) ವತಿಯಿಂದ ನಗರದ ಜಗತ್ ವೃತ್ತದಲ್ಲಿ ಧರಣಿ ನಡೆಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯ ಸರ್ಕಾರದ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ರಾಯಚೂರು ಜಿಲ್ಲೆಯಲ್ಲಿ ಒಂದೇ ತಿಂಗಳಲ್ಲಿ ದಲಿತ ಸಮುದಾಯಕ್ಕೆ ಸೇರಿದ ದೇವದುರ್ಗ ತಾಲೂಕಿನ ಬೊಮ್ಮಾನಂದ, ಲಿಂಗಸೂರು ತಾಲೂಕಿನ ರಾಣಮ್ಮ ಹಾಗೂ ಸಿರವಾರ ತಾಲೂಕಿನ ಹೊಕ್ಕರಣಿ ಗ್ರಾಮದ ಅಶ್ವಿನಿ ಸೇರಿದಂತೆ ಮೂವರು ಬರ್ಬರವಾಗಿ ಹತ್ಯೆಯಾಗಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ಪ್ರತಿಭಟನಾಕಾರರು ಹೇಳಿದರು.

ಅಶ್ವಿನಿ ಅವರು ಸಂಜೆ ಬಯಲು ಪ್ರದೇಶಕ್ಕೆ ತೆರಳಿದ್ದ ಸಂದರ್ಭದಲ್ಲಿ ದುಷ್ಕರ್ಮಿಗಳ ತಂಡ ಅವರನ್ನು ಸುತ್ತುವರಿದು, ಅವರು ರಕ್ಷಣೆಗಾಗಿ ಕೂಗಿಕೊಂಡಾಗ ಸಹಾಯಕ್ಕೆ ಬರಲು ಮುಂದಾದವರನ್ನು ಮಾರಕಾಸ್ತ್ರಗಳಿಂದ ಬೆದರಿಸಿ, ಸಾಮೂಹಿಕ ಅತ್ಯಾಚಾರ ಎಸಗಿ ಬಳಿಕ ಕೊಲೆ ಮಾಡಿ ಬಾವಿಗೆ ಎಸೆದಿದೆ ಎಂದು ಮನವಿಯಲ್ಲಿ ಆರೋಪಿಸಲಾಗಿದೆ.

ಈ ಪ್ರಕರಣವು ಪೂರ್ವನಿಯೋಜಿತ ಸಂಚಿನ ಭಾಗವಾಗಿರುವ ಸಾಧ್ಯತೆಯಿದ್ದು, ಈ ನಿಟ್ಟಿನಲ್ಲಿ ಸಮಗ್ರ ತನಿಖೆ ನಡೆಸಬೇಕು ಎಂದು ಮುಖಂಡರು ಒತ್ತಾಯಿಸಿದರು.

ದಲಿತ ಮಹಿಳೆಯರು, ಬಾಲಕಿಯರು ಹಾಗೂ ಗ್ರಾಮೀಣ ಪ್ರದೇಶದ ದಲಿತ ಸಮುದಾಯದ ಜನರಿಗೆ ಇನ್ನೂ ಸೂಕ್ತ ಭದ್ರತೆ ದೊರೆಯುತ್ತಿಲ್ಲ. ಅತ್ಯಾಚಾರ, ಕೊಲೆ, ದೌರ್ಜನ್ಯ, ಹಿಂಸೆ ಹಾಗೂ ಜಾತಿ ತಾರತಮ್ಯದಂತಹ ಘಟನೆಗಳು ನಿರಂತರವಾಗಿ ನಡೆಯುತ್ತಿದ್ದರೂ ಸರ್ಕಾರ ಹಾಗೂ ಪೊಲೀಸ್ ಇಲಾಖೆ ಪರಿಣಾಮಕಾರಿ ಕ್ರಮ ಕೈಗೊಳ್ಳುವಲ್ಲಿ ವಿಫಲವಾಗಿವೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಅತ್ಯಾಚಾರ ಮತ್ತು ಕೊಲೆ ಪ್ರಕರಣಗಳನ್ನು ಸಾಮಾನ್ಯ ಘಟನೆಗಳಂತೆ ಪರಿಗಣಿಸದೆ, ಆರೋಪಿಗಳ ವಿರುದ್ಧ ತ್ವರಿತವಾಗಿ ಕಾನೂನು ಕ್ರಮ ಕೈಗೊಳ್ಳಬೇಕು. ಅಪರಾಧ ತಡೆಗೆ ಪೊಲೀಸ್ ಇಲಾಖೆಗೆ ಆಧುನಿಕ ತಂತ್ರಜ್ಞಾನ ಹಾಗೂ ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗಿದ್ದರೂ ಅಪರಾಧಗಳು ಮುಂದುವರಿಯುತ್ತಿರುವುದು ಪೊಲೀಸ್ ವ್ಯವಸ್ಥೆಯ ಕಾರ್ಯವೈಖರಿ ಕುರಿತು ಪ್ರಶ್ನೆಗಳನ್ನು ಹುಟ್ಟುಹಾಕಿದೆ ಎಂದು ಹೇಳಿದರು.

ಕರ್ತವ್ಯಲೋಪ, ಭ್ರಷ್ಟಾಚಾರ ಹಾಗೂ ಗಂಭೀರ ಪ್ರಕರಣಗಳ ತನಿಖೆಯಲ್ಲಿ ನಿರ್ಲಕ್ಷ್ಯ ತೋರಿದ ಪೊಲೀಸ್ ಅಧಿಕಾರಿಗಳ ವಿರುದ್ಧ ಕಠಿಣ ಶಿಸ್ತು ಕ್ರಮ ಜರುಗಿಸಬೇಕು. ತಪ್ಪಿತಸ್ಥರೆಂದು ಸಾಬೀತಾದ ಪೊಲೀಸ್ ಅಧಿಕಾರಿಗಳನ್ನು ಸೇವೆಯಿಂದ ವಜಾಗೊಳಿಸುವ ಕ್ರಮ ಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಧರಣಿಯಲ್ಲಿ ಸಂಘಟನೆಯ ರಾಜ್ಯ ಸಂಚಾಲಕ ಅರ್ಜುನ ಭದ್ರೆ, ಮರಿಯಪ್ಪ ಹಳ್ಳಿ, ಮಲ್ಲಿಕಾರ್ಜುನ ಕ್ರಾಂತಿ, ಮಹಾಂತೇಶ ಬಡದಾಳ, ಮಲ್ಲಿಕಾರ್ಜುನ ಖನ್ನಾ, ಸೂರ್ಯಕಾಂತ ಅಜಾದಪೂರ, ರಾಜಕುಮಾರ ನಿಂಬಾಳ, ಶಿವಕುಮಾರ ಕೋರಳ್ಳಿ, ಪ್ರೀತಮ ನಾಕಮನ, ಮಹೇಶ ಕೋಕಿಲೆ, ಕುಮಾರ ಕುಳಗೇರಿ, ಸಾಯಬಣ್ಣ ಕೋಕಟನೂರ, ಪರಶುರಾಮ ರಾಜಾಪೂರ, ರಾಮಣ್ಣ ಪಾಸ್ವನ, ರಾಜಶೇಖರ ಹೊಸಮನಿ ಸೇರಿದಂತೆ ಹಲವರು ಭಾಗವಹಿಸಿದ್ದರು.

ಗ್ರಾಮದಲ್ಲೇ ಲಭ್ಯವಿರುವ ಉದ್ಯೋಗಾವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಿ : ಸಿಇಒ ಗಿತ್ತೆ ಮಾಧವ್ ವಿಠ್ಠಲರಾವ್



ಔರಾದ್,ಸೆ.04-

ಗ್ರಾಮೀಣ ಭಾಗದ ಜನರು ಉದ್ಯೋಗಕ್ಕಾಗಿ ಗುಳೆ ಹೋಗುವುದನ್ನು ತಪ್ಪಿಸುವ ಉದ್ದೇಶದಿಂದ ಸರ್ಕಾರ ಹಲವು ಸೌಲಭ್ಯಗಳನ್ನು ಕಲ್ಪಿಸಿದೆ. ಗ್ರಾಮದಲ್ಲೇ ಲಭ್ಯವಿರುವ ಉದ್ಯೋಗಾವಕಾಶಗಳನ್ನು ಸದುಪಯೋಗಪಡಿಸಿಕೊಂಡು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಿತ್ತೆ ಮಾಧವ್ ವಿಠ್ಠಲರಾವ್ ಹೇಳಿದರು.

ತಾಲೂಕಿನ ಜಂಬಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿಬಿ ಜಿರಾಮ್‌ಜಿ ಯೋಜನೆಯಡಿ ನಡೆಯುತ್ತಿರುವ ಸಿಸಿಟಿ ಕಾಮಗಾರಿಯನ್ನು ಗುರುವಾರ ಪರಿಶೀಲಿಸಿ ಮಾತನಾಡಿದ ಅವರು, ಯಾರೂ ಗುಳೆ ಹೋಗಬಾರದು. ತಮ್ಮೂರಿನಲ್ಲೇ ಉದ್ಯೋಗ ಪಡೆದು ಬದುಕು ಕಟ್ಟಿಕೊಳ್ಳಬೇಕು. ವಿಬಿ-ಜಿರಾಮ್‌ಜಿ ಯೋಜನೆಯಡಿ ವಾರ್ಷಿಕ ಉದ್ಯೋಗದ ದಿನಗಳನ್ನು 100ರಿಂದ 125 ದಿನಗಳಿಗೆ ಹೆಚ್ಚಿಸಲಾಗಿದೆ. ದಿನಕ್ಕೆ 382 ರೂ. ಕೂಲಿ ನೀಡಲಾಗುತ್ತಿದ್ದು, 125 ದಿನಗಳ ಉದ್ಯೋಗ ಪಡೆದ ಕುಟುಂಬವು ಗರಿಷ್ಠ 47,750 ರೂ. ಕೂಲಿ ಪಡೆಯಬಹುದಾಗಿದೆ ಎಂದು ತಿಳಿಸಿದರು.

ನಂತರ ಕಂದಗೂಳ್ ಗ್ರಾಮಕ್ಕೆ ಭೇಟಿ ನೀಡಿದ ಅವರು, ಜಲ ಜೀವನ್ ಮಿಷನ್ ಕಾಮಗಾರಿಯನ್ನು ಪರಿಶೀಲಿಸಿದರು. ಗ್ರಾಮಸ್ಥರಿಗೆ ಸಮರ್ಪಕ ಹಾಗೂ ಶುದ್ಧ ಕುಡಿಯುವ ನೀರು ದೊರೆಯುವಂತೆ ಕಾಮಗಾರಿಗಳನ್ನು ಗುಣಮಟ್ಟದಿಂದ ಪೂರ್ಣಗೊಳಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಬಳಿಕ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿ ಮಕ್ಕಳ ಹಾಜರಾತಿ, ಪೌಷ್ಟಿಕ ಆಹಾರ ವಿತರಣೆ, ಬೆಳವಣಿಗೆ ದಾಖಲಾತಿ ಹಾಗೂ ಸ್ವಚ್ಛತಾ ವ್ಯವಸ್ಥೆಯನ್ನು ಪರಿಶೀಲಿಸಿದರು.

ವಡಗಾಂವ್, ಜಂಬಗಿ ಹಾಗೂ ಸಂತಪೂರದ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯಗಳಿಗೆ ಭೇಟಿ ನೀಡಿದ ಅವರು, ವಿದ್ಯಾರ್ಥಿಗಳೊಂದಿಗೆ ನೇರವಾಗಿ ಸಂವಾದ ನಡೆಸಿ ಅವರ ಸಮಸ್ಯೆಗಳನ್ನು ಆಲಿಸಿದರು. ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸರ್ಕಾರಿ ಶಾಲೆಗಳು ಸೇರಿದಂತೆ ವಿವಿಧ ಸಾರ್ವಜನಿಕ ಸೇವಾ ಕೇಂದ್ರಗಳಿಗೂ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಸಾರ್ವಜನಿಕರಿಗೆ ಸರ್ಕಾರದ ಸೇವೆಗಳು ಸಮರ್ಪಕವಾಗಿ ತಲುಪಿಸುವಲ್ಲಿ ಯಾವುದೇ ಲೋಪವಾಗಬಾರದು. ಸಿಬ್ಬಂದಿ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕಿರಣ್ ಪಾಟೀಲ್, ಸಹಾಯಕ ನಿರ್ದೇಶಕ ಶಿವಕುಮಾರ್ ಘಾಟೆ, ಗ್ರಾಮೀಣ ಕುಡಿಯುವ ನೀರು ನೈರ್ಮಲ್ಯ ಇಲಾಖೆಯ ಎಇಇ ಮಾರುತಿ ರಾಠೋಡ್, ಐಇಸಿ ಸಂಯೋಜಕ ಅಂಬಾದಾಸ್ ಪಾಟೀಲ್ ಹಾಗೂ ಪಿಡಿಒ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.

ಒಂದನೇಯ ಪುಟದಿಂದ

120 ಖಾಸಗಿ ಶಾಲೆಗಳ ಶಿಕ್ಷಕರಿಗೆ ಶಿಕ್ಷಕ ರತ್ನ ಗೌರವ

ಸುಮಾರು 120 ಖಾಸಗಿ ಶಿಕ್ಷಣ ಸಂ ಸ್ಥೆಗಳು ಕಾರ್ಯನಿರ್ವಹಿಸುತ್ತಿದ್ದು, ಪ್ರತಿಯೊಂದು ಶಾಲೆಯಿಂದ ತಲಾ ಒಬ್ಬ ಶಿಕ್ಷಕರನ್ನು ಶಿಕ್ಷಕ ರತ್ನ ಪ್ರಶಸ್ತಿಗೆ ಆಯ್ಕೆ ಮಾಡಿ ಗೌರವಿಸಲಾಗು ವುದು. ಉತ್ತಮ ಸೇವೆ, ಕರ್ತವ್ಯನಿಷ್ಠೆ ಹಾಗೂ ಸೇವಾ ಮನೋಭಾವವನ್ನು ಮಾನದಂಡವಾಗಿಟ್ಟುಕೊಂಡು ಅರ್ಹ ಶಿಕ್ಷಕರನ್ನು ಆಯ್ಕೆ ಮಾಡ ಬೇಕು ಎಂದು ರಾಮಾಂಜನೇಯಲು ತಿಳಿಸಿದರು.

ಆಯ್ಕೆಯಾದ ಶಿಕ್ಷಕರ ಹೆಸರುಗಳನ್ನು ಸೆ.10ರೊಳಗಾಗಿ ರುಸಾ ್ಮ ಅಧ್ಯಕ್ಷರು ಅಥವಾ ಕಾರ್ಯ ದರ್ಶಿಗಳಿಗೆ ತಲುಪಿಸುವಂತೆ ಶಾಲಾ ಆಡಳಿತ ಮಂಡಳಿಗಳಿಗೆ ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ನಾಗರೆಡ್ಡಿ, ವೆಂಕಟೇಶ, ಹೈ ಫಿರೋ ಜ್, ಶರಣಯ್ಯ ಸ್ವಾಮಿ ಹಾಗೂ ಚಂದ್ರಮೋಹನ್ ರೆಡ್ಡಿ ಉಪಸ್ಥಿತರಿದ್ದರು.

ಹೊಕ್ರಾಣಿಗೆ ಸಚಿವ ಮುನಿಯಪ್ಪ ಭೇಟಿ: ಅಶ್ವಿನಿ ಕುಟುಂಬಕ್ಕೆ ಸಾಂತ್ವನ

ಎಂದು ಅಧಿಕಾರಿಗಳಿಗೆ ಹಾಗೂ ಗ್ರಾಮಸ್ಥರಿಗೆ ಕರೆ ನೀಡಿದರು.

''ಸಾಮರಸ್ಯ ಮೂಡಿಸುವ ನಿಟ್ಟನಲ್ಲಿ 41 ವರ್ಷಗಳಿಂದ ನಿರಂತರ ಹೋರಾಟ ನಡೆಸುತ್ತಿದ್ದೇವೆ. ಸಮಾಜದಲ್ಲಿ ಸಾಮರಸ್ಯ ಮೂಡದಿದ್ದರೆ ಅಭಿವೃದ್ಧಿ ಮತ್ತು ಶಾಂತಿ ನೆಲೆಸುವುದು ಕಷ್ಟ. ಈ ನಿಟ್ಟಿನಲ್ಲಿ ಎಲ್ಲರೂ ಒಗ್ಗಟ್ಟಿನಿಂದ ಕೈಜೋಡಿಸಬೇಕು'' ಎಂದು ಸಚಿವ ಮುನಿಯಪ್ಪ ಹೇಳಿದರು.

ಪ್ರತಿ ವಾರ ಗ್ರಾಮಗಳಿಗೆ ಅಧಿಕಾರಿಗಳ ಭೇಟಿ

ಜಿಲ್ಲಾಧಿಕಾರಿ ಪೂವಿತಾ ಎಸ್. ಮಾತನಾಡಿ, ಜಿಲ್ಲೆಯಲ್ಲಿ ಪ್ರತಿ ವಾರ ತಾಲೂಕು ಮಟ್ಟದಲ್ಲಿ ಸಿಇಒ ಹಾಗೂ ಎಸ್‌ಪಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಗ್ರಾಮಗಳಿಗೆ ಭೇಟಿ ನೀಡಿ ಸರ್ಕಾರದ ಯೋಜನೆಗಳ ಕುರಿತು ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿ ಕೊಳ್ಳಲಾಗುತ್ತಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಭೋಸರಾಜು, ಮಾನ್ವಿ ಶಾಸಕ ಹಂಪಯ್ಯ ನಾಯಕ, ಸಮಾಜ ಕಲ್ಯಾಣ ಇಲಾಖೆಯ ಸರ್ಕಾರದ ಕಾರ್ಯದರ್ಶಿ ಕೆ.ಪಿ. ಮೋಹನ್ ರಾಜ್, ಆಯುಕ್ತ ರಾಕೇಶ್ ಕುಮಾರ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಸು ಗಿರಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಕೃಷ್ಣ ಶಾವಂತಗೇರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಂಘಟನೆಗಳ ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಮನಸ್ಸಿಗೆ ಶಾಂತಿ ನೆಮ್ಮದಿ - ಅಶೋಕ ಪವಾರ

ಸೂಗಪ್ಪ ಸಾಹುಕಾರ ಮಾತನಾಡಿ ಬ್ರಹ್ಮಕುಮಾರಿ ಸಂಸ್ಥೆ ಜಾತಿ, ಮತ, ಪಂಥಗಳ ಭೇದವಿಲ್ಲದೆ ರಕ್ಷಾ ಬಂಧನ ಕಾರ್ಯಕ್ರಮವನ್ನು ಎಲ್ಲರನ್ನು ಒಳಗೊಂಡಂತೆ ನಡೆಸುತ್ತಿದೆ. ಒಬ್ಬ ದೇವರು ಒಂದು ಕುಟುಂಬ ಎನ್ನುವ ಧ್ಯೇಯ ವಾಕ್ಯ ಸಾಮರಸ್ಯದ ಸಮಾಜ ನಿರ್ಮಾಣಕ್ಕೆ ಅತ್ಯಂತ ಸಹಾಯಕಾರಿಯಾಗಿದೆ ಎಂದರು. ಬ್ರಹ್ಮಕುಮಾರಿ ಆಶ್ರಮದ ರಾಜಯೋಗಿನಿ ಜ್ಯೋತಿ ಅಕ್ಕ ಮಾತನಾಡಿ

ಪರಮಾತ್ಮನನ್ನು ಸ್ಮೃತಿ ಮಾಡುವ ಸ್ಥಾನ ಇದು. ವಿಶ್ವದಾದ್ಯಂತ 150 ದೇಶಗಳಲ್ಲಿ ಇರುವ ಸುಮಾರು 10 ಸಾವಿರ ಶಾಖೆಗಳಲ್ಲಿ ರಕ್ಷಾ ಬಂಧನ ಆಚರಿಸಲಾಗಿದೆ ಎಂದು ಹೇಳಿದರು. ಪುಟ್ಟ ಮಕ್ಕಳಿಗೆ ಆಕರ್ಷಕವಾಗಿ ಕೃಷ್ಣ, ರಾಧೆ ಯವರ ವೇಷ ಭೂಷಣ ಗಳನ್ನು ಹಾಕಲಾಗಿತ್ತು.

ಇದೇ ಸಂದರ್ಭದಲ್ಲಿ 'ರಕ್ಷಾ ಬಂಧನ' ಹಬ್ಬದ ಅಂಗವಾಗಿ ನೆರೆದಿದ್ದ ಗಣ್ಯರಿಗೆ ಮತ್ತು ಪತ್ರಕರ್ತರಿಗೆ 'ರಕ್ಷೆ' ಕಟ್ಟಲಾಯಿತು.ಈ ವೇಳೆ ಅರಿಕೇರಿ ಮಲ್ಲಪ್ಪ ಸಾಹುಕಾರ,ಶಿವರಾಮರೆಡ್ಡಿ, ಪಿ ಶ್ರೀನಿವಾಸ್, ಗಲಗಿನಶಿವಲಿಂಗಯ್ಯ, ಜಿ.ವಿರೇಶ,ಮಲ್ಲಿಕಾರ್ಜುನ ಮಹೇಂದ್ರಕರ್ ಸೇರಿದಂತೆ ಅಧ್ಯಾತ್ಮ ಸಾಧಕರು, ಮಹಿಳೆಯರು ಇದ್ದರು.

ಬಾಲಕರ ಹಾಗೂ ಬಾಲಕಿಯರ ವಸತಿ ನಿಲಯ ಮಂಜೂರು ಮಾಡಲು ಸಚಿವರಿಗೆ ಮನವಿ

ವಸತಿ ನಿಲಯವನ್ನು ಸ್ಥಾಪಿಸಬೇಕು,ಮಾನ್ವಿ ಹಾಗೂ ಸಿರವಾರ ತಾಲ್ಲೂಕಿನ ವೃತ್ತಿಪರ ಶಿಕ್ಷಣ ಪಡೆಯುತ್ತಿರುವ ಬಡ ಹಾಗೂ ಗ್ರಾಮೀಣ ವಿದ್ಯಾರ್ಥಿಗಳಿಗೆ ಅಗತ್ಯ ವಸತಿ ಸೌಲಭ್ಯ ಒದಗಿಸಲು ಸರ್ಕಾರದ ಮಟ್ಟದಲ್ಲಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ಭೀಮ್ ಸೇನೆ ಜಿಲ್ಲಾ ಅಧ್ಯಕ್ಷರಾದ ಸಂಗನಬಸವ ಹಿರೇ ಬಾದಾರದಿನ್ನಿ, ಮಾನ್ವಿ ತಾಲೂಕ ಅಧ್ಯಕ್ಷರಾದ ಕಿರಣ್ ಕುಮಾರ್ ಉದ್ಬಾಳ ಇನ್ನಿತರರು ಉಪಸ್ಥಿತರಿದ್ದರು

ಕಲಿಕಾ ಸಾಮರ್ಥ್ಯ ಹಾಗೂ ಭವಿಷ್ಯದ ಭರವಸೆ ಹೆಚ್ಚಿಸಲು ವಿದ್ಯಾರ್ಥಿಗಳಿಗೆ 'ಹೊಸದಿಗಂತ' ಕಾರ್ಯಕ್ರಮ ಸಕಾಲಿಕ - ಪ್ರೊ.ಕರಿಗೂಳಿ

ಈ ಎಲ್ಲಾ ಅಧಿವೇಶನಗಳು ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ, ಸಂವಹನ ಸಾಮರ್ಥ್ಯ, ತಾಂತ್ರಿಕ ಜ್ಞಾನ, ತಾರ್ಕಿಕ ಚಿಂತನೆ, ಸ್ವ-ಅರಿವು ಹಾಗೂ ವೃತ್ತಿ ಯೋಜನೆ ಬೆಳೆಸುವಲ್ಲಿ ಸಹಕಾರಿಯಾದವು.

ಹೊಸದಿಗಂತ ಓರಿಯಂಟೇಶನ್ ಕಾರ್ಯಕ್ರಮ, ನಿರಂತರ ಕಲಿಕೆಯ ಸಂಕಲ್ಪದೊಂದಿಗೆ, ಇಂದು ಸಾಂಕೇತಿಕವಾಗಿ ಸಮಾರೋಪಗೊಂಡಿತು.

ಇಂದಿನ ಕಾರ್ಯಕ್ರಮದಲ್ಲಿ ಡಾ.ಕರಿಗೂಳಿ, ಪ್ರಾಂಶುಪಾಲರು, ಅಧ್ಯಕ್ಷೀಯ ನುಡಿಗಳನ್ನು ನೀಡಿ, ವಿದ್ಯಾರ್ಥಿಗಳು ತಮ್ಮ ಕಾಲೇಜು ಜೀವನದ ಆರಂಭದಲ್ಲಿಯೇ ಉತ್ತಮ ಗುರಿಗಳನ್ನು ಹೊಂದಿ, ಜ್ಞಾನ, ಕೌಶಲ್ಯ ಮತ್ತು ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು. ಡಾ.ಸರ್ಫರಾಜ್ ಅಹಮದ್ ಅವರು 21ನೇ ಶತಮಾನದ ಕೌಶಲ್ಯಗಳ ಸಂವಹನ ಕೌಶಲ್ಯಗಳ ಕುರಿತು, ಶಂಕರಪ್ಪ ಎಂ.ಸಂವಹನ ಕೌಶಲ್ಯಗಳ ಕುರಿತು, ಡಾ. ವಿರೂಪಾಕ್ಷ ಕೆ. ಡಿಜಿಟಲ್ ಕೌಶಲ್ಯಗಳ ಕುರಿತು, ಡಾ.ಶಶಿಕುಮಾರ್ ಅವರು ಕುರಿತು, ವೀರೇಶ ಅವರು '' '' ವಿಷಯದ ಕುರಿತು ಹಾಗೂ ಸಂಚಾಲಕರಾದ ರವಿಕುಮಾರ ಅವರು '' '' ವಿಷಯದ ಕುರಿತು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು.

ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳು ಹೊಸದಿಗಂತ ಕೌಶಲ್ಯ ಉಪನ್ಯಾಸ ಮಾಲಿಕೆ-2026 ಕಾರ್ಯಕ್ರಮದ ಕುರಿತು ತಮ್ಮ ಸಕಾರಾತ್ಮಕ ಅಭಿಪ್ರಾಯಗಳನ್ನು ವ್ಯಕ್ತಪಡಿಸಿ, ತಮ್ಮ ಶೈಕ್ಷಣಿಕ ಹಾಗೂ ವೈಯಕ್ತಿಕ ಬೆಳವಣಿಗೆಗೆ ಈ ಎಲ್ಲಾ ಕೌಶಲ್ಯಗಳು ಉಪಯುಕ್ತವಾಗಿವೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬೋಧಕರು ಹಾಗೂ ಬೋಧಕೇತರ ಸಿಬ್ಬಂದಿ, ಎಲ್ಲಾ ಪ್ರಥಮ ವರ್ಷದ ಪದವಿ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿದರು.

ಹೊಸದಿಗಂತ-ಓರಿಯಂಟೇಶನ್ ಕಾರ್ಯಕ್ರಮ 2026-27 ಹೊಸ ವಿದ್ಯಾರ್ಥಿಗಳಿಗೆ ಕಾಲೇಜಿನ ಶೈಕ್ಷಣಿಕ ವಾತಾವರಣದ ಪರಿಚಯ ಮಾಡಿಸುವುದರ ಜೊತೆಗೆ, ಅವರಲ್ಲಿ ಆತ್ಮವಿಶ್ವಾಸ, ಕೌಶಲ್ಯ ಮತ್ತು ಭವಿಷ್ಯದ ವೃತ್ತಿಜೀವನದ ಬಗ್ಗೆ ಸ್ಪಷ್ಟತೆ ಮೂಡಿಸುವಲ್ಲಿ ಯಶಸ್ವಿಯಾಯಿತು.

ಚಿಂಚೋಳಿ ಸರ್ಕಾರಿ ಶಾಲೆ ಮಕ್ಕಳಿಗೆ ಉಚಿತ ಶೂ-ಸಾಕ್ಸ್ ವಿತರಣೆ

ಚಿಂಚೋಳಿ,ಸೆ.04-

ತಾಲೂಕಿನ ಸುಲೇಪೇಟ ಗ್ರಾಮದ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ (ಕೆಪಿಎಸ್) ವಿದ್ಯಾರ್ಥಿಗಳಿಗೆ ಸರ್ಕಾರದ ವತಿಯಿಂದ ಉಚಿತವಾಗಿ ಶೂ-ಸಾಕ್ಸ್ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಎಸ್ಡಿಎಂಸಿ ಉಪಾಧ್ಯಕ್ಷ ಜಹಿರೋದ್ದಿನ್ ಪಟೇಲ್ ಅವರು ವಿದ್ಯಾರ್ಥಿಗಳಿಗೆ ಶೂ-ಸಾಕ್ಸ್ ವಿತರಿಸಿ ಮಾತನಾಡಿ, ಸರ್ಕಾರಿ ಶಾಲೆಗಳ ಮಕ್ಕಳಿಗೆ ಶೈಕ್ಷಣಿಕ ಸೌಲಭ್ಯಗಳ ಜತೆಗೆ ಅಗತ್ಯವಾದ ಪಾದರಕ್ಷೆಗಳನ್ನು ಉಚಿತವಾಗಿ ಒದಗಿಸುತ್ತಿರುವುದು ಸ್ವಾಗತಾರ್ಹ. ಇದರಿಂದ ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳ ಮಕ್ಕಳಿಗೆ ಆರ್ಥಿಕ ನೆರವಾಗುವುದರ ಜತೆಗೆ, ವಿದ್ಯಾರ್ಥಿಗಳಲ್ಲಿ ಸಮಾನತೆ, ಶಿಸ್ತು ಹಾಗೂ ಆತ್ಮವಿಶ್ವಾಸ ಬೆಳೆಸಲು ಸಹಕಾರಿಯಾಗಲಿದೆ ಎಂದು ಹೇಳಿದರು.

ಮಕ್ಕಳು ಸರ್ಕಾರ ನೀಡುತ್ತಿರುವ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಉತ್ತಮವಾಗಿ ವಿದ್ಯಾಭ್ಯಾಸ ಮಾಡಬೇಕು. ಶಿಕ್ಷಣದ ಮೂಲಕ ಉತ್ತಮ ಭವಿಷ್ಯ ರೂಪಿಸಿಕೊಳ್ಳುವತ್ತ ವಿದ್ಯಾರ್ಥಿಗಳು ಗಮನಹರಿಸಬೇಕು ಎಂದು ಸಲಹೆ ನೀಡಿದರು.

ಸರ್ಕಾರಿ ಶಾಲೆಗಳಲ್ಲಿ ಮಕ್ಕಳಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸುವ ಮೂಲಕ ಶಿಕ್ಷಣದ ಗುಣಮಟ್ಟ ಹಾಗೂ ದಾಖಲಾತಿ ಹೆಚ್ಚಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತಿದೆ. 202627ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳಿಗೆ ಶೂಸಾಕ್ಸ್ ಸೇರಿದಂತೆ ವಿವಿಧ ಸೌಲಭ್ಯಗಳನ್ನು ನೀಡಲಾಗುತ್ತಿದ್ದು,

ವಾಡಿ ಅಂಬೇಡ್ಕರ್ ವಸತಿ ಶಾಲೆಯಲ್ಲಿ ವಿಶ್ವ ಕ್ರೀಡಾ ದಿನಾಚರಣೆ

ವಿದ್ಯಾರ್ಥಿಗಳ ದೈಹಿಕ ಆರೋಗ್ಯಕ್ಕೆ ಕ್ರೀಡಾ ಚಟುವಟಿಕೆಗಳು ಅಗತ್ಯ : ಪ್ರಶಾಂತ ದೇಶಮುಖ



ವಾಡಿ,,ಸೆ.04-

ಶದ ಭಾವಿ ಪ್ರಜೆಗಳಾದ ವಿದ್ಯಾರ್ಥಿ-ಯುವಜನರ ದೈಹಿಕ ಆರೋಗ್ಯದ ಗುಟ್ಟು ಕ್ರೀಡಾ ಚಟುವಟಿಕೆಗಳಲ್ಲಿದೆ ಎಂದು ಸ್ಥಳೀಯ ಎಸಿಸಿ ಅದಾನಿ ಸಿಮೆಂಟ್ ಕಾರ್ಖಾನೆಯ ಘಟಕ ಮುಖ್ಯಸ್ಥ ಪ್ರಶಾಂತ ದೇಶಮುಖ ಹೇಳಿದರು.

ಪಟ್ಟಣದ ಡಾ. ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಯಲ್ಲಿ ಆಯೋಜಿಸಿದ್ದ ವಿಶ್ವ ಕ್ರೀಡಾ ದಿನಾಚರಣೆ ಕಾರ್ಯಕ್ರಮದಲ್ಲಿ ಅದಾನಿ ಫೌಂಡೇಶನ್ ವತಿಯಿಂದ ಮಂಜೂರು ಮಾಡಲಾದ ವಿವಿಧ ಕ್ರೀಡಾ ಸಾಮುಗ್ರಿಗಳನ್ನು ವಿದ್ಯಾರ್ಥಿಗಳಿಗೆ ವಿತರಿಸಿ ಅವರು ಮಾತನಾಡಿದರು.

ಒಂದಾನೊಂದು ಕಾಲದಲ್ಲಿ ಗ್ರಾಮೀಣ ಕ್ರೀಡೆಗಳೇ ದೈಹಿಕ ಸದೃಢತೆಗೆ ಪೂರಕವಾಗಿದ್ದವು. ಇಂದು ಕ್ರೀಡಾಪಟುಗಳಿಗೆ ಹಲವು ಸೌಲಭ್ಯಗಳು ಲಭ್ಯವಿವೆ. ಮೈದಾನದಲ್ಲಿ ಆಟವಾಡುವುದರಿಂದ ಮಕ್ಕಳ ದೈಹಿಕ ಆರೋಗ್ಯ ಉತ್ತಮಗೊಳ್ಳುತ್ತದೆ. ವಿದ್ಯಾರ್ಥಿಗಳು ಮಾನಸಿಕವಾಗಿ ಹಾಗೂ ದೈಹಿಕವಾಗಿ ಚೈತನ್ಯಶೀಲರಾಗಿದ್ದಾಗ ಮಾತ್ರ ಅವರಲ್ಲಿರುವ ಪ್ರತಿಭೆ ಹೊರಜಗತ್ತಿಗೆ ಪರಿಚಯವಾಗಲು ಸಾಧ್ಯ. ಆದ್ದರಿಂದ ಪಾಠದಷ್ಟೇ ಆಟಕ್ಕೂ ಆದ್ಯತೆ ನೀಡಬೇಕು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಡಾ. ಬಿ.ಆರ್. ಅಂಬೇಡ್ಕರ್ ವಸತಿ ಶಾಲೆಯ ಪ್ರಾಂಶುಪಾಲ ಉದಯ ಧರೆಣ್ಣವರ್, ಕ್ರೀಡಾ ದಿನಾಚರಣೆಯ ಅಂಗವಾಗಿ ಅದಾನಿ ಸಿಮೆಂಟ್ ಕಾರ್ಖಾನೆಯ ಘಟಕ ಮುಖ್ಯಸ್ಥರು ಶಾಲೆಯ ನೂರಾರು ವಿದ್ಯಾರ್ಥಿಗಳಿಗೆ ಕ್ರೀಡಾ ಸಾಮಗ್ರಿಗಳನ್ನು ವಿತರಿಸುವ ಮೂಲಕ ಮಕ್ಕಳ ದೈಹಿಕ ಆರೋಗ್ಯದ ಬಗ್ಗೆ ಕಾಳಜಿ ತೋರಿದ್ದಾರೆ. ವಿದ್ಯಾರ್ಥಿಗಳು ಈ ಸೌಲಭ್ಯವನ್ನು ಸದುಪಯೋಗಪಡಿಸಿಕೊಂಡು ಕ್ರೀಡಾ ಕ್ಷೇತ್ರದಲ್ಲಿ ಉತ್ತಮ ಪ್ರತಿಭೆ ಪ್ರದರ್ಶಿಸಬೇಕು ಎಂದು ಹೇಳಿದರು.

ಎಸಿಸಿ ಕಂಪನಿಯ ಸಿಮೆಂಟ್ ಗುಣಮಟ್ಟ ಮುಖ್ಯಸ್ಥ ಕೋಮಲ್ ಸಿಂಗ್ ಡಾಂಗೆ, ಜನರಲ್ ಮ್ಯಾನೇಜರ್ ಆದರ್ಶ ಕುಮಾರ, ಜೈಸ್ವಾಲ್, ಎಸಿಸಿ ಸಿಮೆಂಟ್ ಕಾರ್ಖಾನೆಯ ಸಿಎಸ್ ಆರ್ ಅದಾನಿ ಫೌಂಡೇಶನ್ ಮುಖ್ಯಸ್ಥ ಶೇಖ್ ಶಬ್ಬೀರ್, ಡಿ.ಆರ್.ಶರತ್, ಯೋಗ ಶಿಕ್ಷಕ ಮಲ್ಲಯ್ಯಸ್ವಾಮಿ ಮಠಪತಿ, ಪತ್ರಕರ್ತ ಮಡಿವಾಳಪ್ಪ ಹೇರೂರ, ನಿಲಯ ಪಾಲಕ ನಾಗರಾಜ ನೆಲೋಗಿ, ಶಿಕ್ಷಕರಾದ ಸಿದ್ದಲಿಂಗ ರಾಠೋಡ, ನೀಲಯ್ಯ ಹಿರೇಮಠ, ಅದಾನಿ ಫೌಂಡೇಶನ್ ಸಿಬ್ಬಂದಿ ಈರಣ್ಣ ಇಸಬಾ, ಸುನಿತಾ ಸಿತಾಳೆ, ಅಶ್ವಿನಿ ಗೌಳಿ, ಶ್ವೇತಾರಾಣಿ ಸೇರಿದಂತೆ ನೂರಾರು ಜನ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ದೈಹಿಕ ಶಿಕ್ಷಕ ಶ್ರೀನಾಥ್ ಇರಗೊಂಡ ನಿರೂಪಿಸಿ, ವಂದಿಸಿದರು.

105.20 ಕೋಟಿ ರೂ. ಮೊತ್ತದ ಕಾಮಗಾರಿಗಳಿಗೆ ಒಪ್ಪಿಗೆ : ಸಚಿವ ಪ್ರಿಯಾಂಕ್ ಖರ್ಗೆ



ಬೆಂಗಳೂರು,ಸೆ.05-

ಕಲಬುರಗಿ ಜಿಲ್ಲೆಯ ಅಭಿವೃದ್ಧಿಗೆ ಸಂಬಂಧಿಸಿದ ಎರಡು ಮಹತ್ವದ ನೀರಾವರಿ ಹಾಗೂ ಜಲಸಂರಕ್ಷಣಾ ಯೋಜನೆಗಳಿಗೆ ಮುಖ್ಯಮಂತ್ರಿ ಅವರ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ದೊರೆತಿದೆ ಎಂದು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಗ್ರಹ, ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಇ-ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಆಳಂದ ತಾಲೂಕಿನ 12 ಕೆರೆಗಳಿಗೆ ನೀರು ತುಂಬಿಸುವ ಯೋಜನೆ: ಬೋರಿ ನದಿಯಿಂದ ನೀರನ್ನು ಎತ್ತಿ ಕಲಬುರಗಿ ಜಿಲ್ಲೆಯ ಆಳಂದ ತಾಲೂಕಿನ 12 ಕೆರೆಗಳಿಗೆ ತುಂಬಿಸುವ 56 ಕೋಟಿ ರೂ. ಮೊತ್ತದ ಏತ ನೀರಾವರಿ ಯೋಜನೆಗೆ ಸಚಿವ ಸಂಪುಟ ಅನುಮೋದನೆ ನೀಡಿದೆ. ಈ ಯೋಜನೆಗೆ 2023 24ನೇ ಸಾಲಿನಲ್ಲಿ ಆಡಳಿತಾತ್ಮಕ ಅನುಮೋದನೆ ದೊರೆತಿದ್ದು, ಇದೀಗ ಯೋಜನೆಯನ್ನು ಮುಂದುವರಿಸಲು ಸಂಪುಟ ಒಪ್ಪಿಗೆ ನೀಡಿದೆ.

ಯೋಜನೆಯಡಿ 28.94 ಎಂಸಿಎಫ್‌ಟಿ ನೀರನ್ನು 12 ಕೆರೆಗಳಿಗೆ ತುಂಬಿಸಲಾಗುವುದು. ಬೋರಿ ನದಿಯಿಂದ ನೀರೆತ್ತಲು ಪಂಪಿಂಗ್ ವ್ಯವಸ್ಥೆ ನಿರ್ಮಿಸುವುದರ ಜೊತೆಗೆ ಅಗತ್ಯ ಪಂಪ್‌ಹೌಸ್, ವಿದ್ಯುತ್ ಉಪಕೇಂದ್ರ, ಪೈಪ್‌ಲೈನ್ ಹಾಗೂ ವಿತರಣಾ ಜಾಲವನ್ನು ನಿರ್ಮಿಸಲಾಗುವುದು. ಇದರಿಂದ ಆಳಂದ ತಾಲೂಕಿನ ಕೆರೆಗಳಿಗೆ ನೀರು ಲಭ್ಯವಾಗುವುದರ ಜೊತೆಗೆ ಜಲಮೂಲಗಳ ಸಮರ್ಪಕ ಬಳಕೆ ಹಾಗೂ ನೀರಾವರಿ ಸೌಲಭ್ಯಕ್ಕೆ ಉತ್ತೇಜನ ದೊರೆಯಲಿದೆ ಎಂದು ಸಚಿವರು ತಿಳಿಸಿದ್ದಾರೆ.

ವಿವಿಧ ಸಣ್ಣ ನೀರಾವರಿ ಕಾಮಗಾರಿಗಳಿಗೆ 49.20 ಕೋಟಿ ರೂ.:


ಕಲಬುರಗಿ ಜಿಲ್ಲೆಯ ವಿವಿಧ ಭಾಗಗಳಲ್ಲಿ ಸಣ್ಣ ನೀರಾವರಿ ಹಾಗೂ ಜಲಸಂರಕ್ಷಣಾ ಕಾಮಗಾರಿಗಳನ್ನು ಕೈಗೊಳ್ಳಲು 49.20 ಕೋಟಿ ರೂ. ಮೊತ್ತದ ಯೋಜನೆಗೂ ಸಚಿವ ಸಂಪುಟ ಅನುಮೋದನೆ ನೀಡಿದೆ. ಯೋಜನೆಯಡಿ ವಿವಿಧ ಪ್ರದೇಶಗಳಲ್ಲಿನ ಕೆರೆಗಳು, ನಾಲಾಗಳು ಹಾಗೂ ಜಲಮೂಲಗಳ ಅಭಿವೃದ್ಧಿ, ಸರಣಿ ಚೆಕ್‌ಡ್ಯಾಂ ನಿರ್ಮಾಣ, ನಾಲಾ ಆಳಗೊಳಿಸುವಿಕೆ ಮತ್ತು ಅಗಲೀಕರಣ ಸೇರಿದಂತೆ ಜಲಸಂಗ್ರಹ ಹಾಗೂ ಅಂತರ್ಜಲ ಮರುಪೂರಣಕ್ಕೆ ಪೂರಕವಾದ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು.

ಈ ಎರಡೂ ಯೋಜನೆಗಳ ಮೂಲಕ ಕಲಬುರಗಿ ಜಿಲ್ಲೆಯ ನೀರಾವರಿ ಮೂಲಸೌಕರ್ಯವನ್ನು ಬಲಪಡಿಸುವುದು, ಲಭ್ಯವಿರುವ ನೀರನ್ನು ಸಮರ್ಪಕವಾಗಿ ಬಳಸಿಕೊಳ್ಳುವುದು ಹಾಗೂ ಕೆರೆನಾಲಾಗಳ ನೀರು ಸಂಗ್ರಹ ಸಾಮರ್ಥ್ಯವನ್ನು ಹೆಚ್ಚಿಸುವ ಉದ್ದೇಶ ಹೊಂದಲಾಗಿದೆ ಎಂದು ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

''ಕಲಬುರಗಿ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಸರ್ಕಾರ ಆದ್ಯತೆ ನೀಡಿದೆ. ನೀರಾವರಿ ಹಾಗೂ ಜಲಸಂರಕ್ಷಣೆಗೆ ಸಂಬಂಧಿಸಿದ ಎರಡು ಪ್ರಮುಖ ಯೋಜನೆಗಳಿಗೆ ಸಚಿವ ಸಂಪುಟ ಅನುಮೋದನೆ ನೀಡಿರುವುದು ಜಿಲ್ಲೆಯ ರೈತರು ಹಾಗೂ ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೆ ಮಹತ್ವದ ಹೆಜ್ಜೆಯಾಗಿದೆ. ನೀರಿನ ಲಭ್ಯತೆ ಹೆಚ್ಚಿಸುವ ಮೂಲಕ ಕೃಷಿ ಚಟುವಟಿಕೆಗಳಿಗೆ ಮತ್ತಷ್ಟು ಉತ್ತೇಜನ ನೀಡಲು ಸರ್ಕಾರ ಬದ್ಧವಾಗಿದೆ'' ಎಂದು ಅವರು ಹೇಳಿದ್ದಾರೆ.

ಒಟ್ಟು 105.20 ಕೋಟಿ ರೂ. ಮೊತ್ತದ ಈ ಎರಡು ಯೋಜನೆಗಳು ಕಲಬುರಗಿ ಜಿಲ್ಲೆಯ ನೀರಾವರಿ ಹಾಗೂ ಜಲಸಂರಕ್ಷಣಾ ಮೂಲಸೌಕರ್ಯವನ್ನು ಮತ್ತಷ್ಟು ಬಲಪಡಿಸಲಿವೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಕಾಡು ಹಂದಿ ದಾಳಿ : ಇಬ್ಬರಿಗೆ ಗಂಭೀರ ಗಾಯ



ಬೀದರ್,ಸೆ.04-

ಕಾಡುಹಂದಿ ದಾಳಿಗೆ ಇಬ್ಬರು ರೈತರು ಗಂಭೀರವಾಗಿ ಗಾಯಗೊಂಡಿರುವ ಘಟನೆ ಭಾಲ್ಕಿ ತಾಲೂಕಿನ ಆನಂದವಾಡಿ ಗ್ರಾಮದಲ್ಲಿ ಗುರುವಾರ ಬೆಳಿಗ್ಗೆ ನಡೆದಿದೆ.

ಆನಂದವಾಡಿ ಗ್ರಾಮದ ರೈತರಾದ ಚನ್ನಬಸಪ್ಪ ಭೂರೆ ಹಾಗೂ ಸಂಪತಾ ಹೆಡೆ ಕಾಡುಹಂದಿ ದಾಳಿಗೆ ಒಳಗಾಗಿ ಗಾಯಗೊಂಡಿದ್ದಾರೆ. ಚನ್ನಬಸಪ್ಪ ಭೂರೆ ಅವರ ಮೇಲೆ ಕಾಡುಹಂದಿ ದಾಳಿ ನಡೆಸಿದ ಪರಿಣಾಮ ತಲೆ, ಕಾಲು ಹಾಗೂ ಹೊಟ್ಟೆ ಭಾಗಕ್ಕೆ ಗಂಭೀರ ಗಾಯಗಳಾಗಿದ್ದು, ಬೀದರ್‌ನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಅವರ ಆರೋಗ್ಯ ಸ್ಥಿತಿ ಗಂಭೀರವಾಗಿದೆ ಎಂದು ತಿಳಿದುಬಂದಿದೆ.

ಇದೇ ವೇಳೆ ಸಂಪತಾ ಹೆಡೆ ಅವರ ಮೇಲೂ ಕಾಡುಹಂದಿ ದಾಳಿ ನಡೆಸಿದ್ದು, ಅವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಅವರನ್ನು ಬೀದರ್‌ನ ಜಿಲ್ಲಾಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಘಟನೆಯಿಂದ ಆನಂದವಾಡಿ ಗ್ರಾಮದ ಜನರಲ್ಲಿ ಆತಂಕ ಮೂಡಿದ್ದು, ಕಾಡುಹಂದಿ ದಾಳಿಯ ಭೀತಿ ಎದುರಾಗಿದೆ. ಅರಣ್ಯ ಇಲಾಖೆ ಅಧಿಕಾರಿಗಳು ಕೂಡಲೇ ಗ್ರಾಮಕ್ಕೆ ಭೇಟಿ ನೀಡಿ ಕಾಡುಹಂದಿಯನ್ನು ಸೆರೆಹಿಡಿಯಬೇಕು ಹಾಗೂ ಗಾಯಗೊಂಡಿರುವ ಇಬ್ಬರು ರೈತರ ಆಸ್ಪತ್ರೆ ಚಿಕಿತ್ಸಾ ವೆಚ್ಚವನ್ನು ಸರ್ಕಾರವೇ ಭರಿಸಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

ವಸತಿ ನಿಲಯದಲ್ಲಿ ಅಸ್ವಚ್ಛತೆ, ಮೂಲಸೌಕರ್ಯ ಕೊರತೆ: ಅಧಿಕಾರಿಗಳ ವಿರುದ್ಧ ಮಕ್ಕಳ ಹಕ್ಕುಗಳ ಆಯೋಗ ಸದಸ್ಯರ ಅಸಮಾಧಾನ



ಬೀದರ್,ಸೆ.,04-

ಸಮಾಜ ಕಲ್ಯಾಣ ಇಲಾಖೆಯ ಡಾ. ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯದಲ್ಲಿ ಕಂಡುಬಂದ ಅಸ್ವಚ್ಛತೆ ಹಾಗೂ ಮೂಲಸೌಕರ್ಯಗಳ ಕೊರತೆ ಕುರಿತು ಮಕ್ಕಳ ಹಕ್ಕುಗಳ ಆಯೋಗದ ಸದಸ್ಯ ಜಗನ್ನಾಥ ಹಲಮಡಗಿ ಅಧಿಕಾರಿಗಳ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಬೀದರ್ ನಗರದ ಜನವಾಡ ರಸ್ತೆಯಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯಕ್ಕೆ ಗುರುವಾರ ಭೇಟಿ ನೀಡಿದ ಅವರು, ವಿದ್ಯಾರ್ಥಿಗಳು ವಾಸಿಸುವ ಕೊಠಡಿಗಳು, ಅಡುಗೆ ಕೋಣೆ, ಶೌಚಾಲಯ ಹಾಗೂ ಕುಡಿಯುವ ನೀರಿನ ವ್ಯವಸ್ಥೆಯನ್ನು ಪರಿಶೀಲಿಸಿದರು. ಈ ವೇಳೆ ಕೊಠಡಿಗಳಲ್ಲಿ ಅಸ್ವಚ್ಛತೆ, ಹರಿದ ಹಾಸಿಗೆಗಳು ಕಂಡುಬಂದಿದ್ದು, ಕಿಟಕಿಗಳ ಗಾಜು ಒಡೆದಿರುವುದನ್ನು ಮುಚ್ಚಲು ವಿದ್ಯಾರ್ಥಿಗಳ ಹಾಸಿಗೆಗಳನ್ನು ಬಳಸುತ್ತಿರುವುದು ಗಮನಕ್ಕೆ ಬಂದಿದೆ. ಇದರಿಂದ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ಬಾತ್‌ರೂಮ್ ಪಕ್ಕದಲ್ಲೇ ಕುಡಿಯುವ ನೀರಿನ ವ್ಯವಸ್ಥೆ ಮಾಡಿರುವುದು, ವಸತಿ ನಿಲಯದಲ್ಲಿ ಸೊಳ್ಳೆಗಳ ಕಾಟ ಹಾಗೂ ಅಡುಗೆ ಕೋಣೆಯಲ್ಲಿ ಸ್ವಚ್ಛತೆ ಕಾಪಾಡದಿರುವುದಕ್ಕೂ ಅವರು ಆಕ್ಷೇಪ ವ್ಯಕ್ತಪಡಿಸಿದರು.

ಸಮಾಜ ಕಲ್ಯಾಣ ಇಲಾಖೆಯ ತಾಲೂಕು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಏನು ಮಾಡುತ್ತಿದ್ದಾರೆ? ಕನಿಷ್ಠ 15-20 ದಿನಗಳಿಗೊಮ್ಮೆ ವಸತಿ ನಿಲಯಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದರೆ ಇಂತಹ ಪರಿಸ್ಥಿತಿ ನಿರ್ಮಾಣವಾಗುತ್ತಿರಲಿಲ್ಲ. ಅಧಿಕಾರಿಗಳ ನಿರ್ಲಕ್ಷ್ಯದಿಂದಲೇ ಈ ಅವ್ಯವಸ್ಥೆ ಉಂಟಾಗಿದೆ ಎಂದು ಜಗನ್ನಾಥ ಹಲಮಡಗಿ ಅಸಮಾಧಾನ ವ್ಯಕ್ತಪಡಿಸಿದರು.

ವಿದ್ಯಾರ್ಥಿಗಳು ತಮ್ಮ ತಂದೆ-ತಾಯಿಯನ್ನು ಬಿಟ್ಟು ಉತ್ತಮ ಶಿಕ್ಷಣ ಪಡೆಯುವ ಉದ್ದೇಶದಿಂದ ವಸತಿ ನಿಲಯಕ್ಕೆ ಬಂದಿರುತ್ತಾರೆ.

ಅವರನ್ನು ಕೇವಲ ವಸತಿ ನಿಲಯದ ವಿದ್ಯಾರ್ಥಿಗಳೆಂದು ನೋಡದೆ ತಮ್ಮ ಮಕ್ಕಳಂತೆ ಕಾಣಬೇಕು. ಮಕ್ಕಳಿಗೆ ಮನೆಯಲ್ಲಿ ಸಿಗುವಂತಹ ಸ್ವಚ್ಛತೆ, ಸುರಕ್ಷತೆ, ಉತ್ತಮ ಆಹಾರ, ಶುದ್ಧ ಕುಡಿಯುವ ನೀರು ಹಾಗೂ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸುವುದು ಅಧಿಕಾರಿಗಳ ಜವಾಬ್ದಾರಿಯಾಗಿದೆ ಎಂದು ಎಚ್ಚರಿಸಿದರು.

ವಸತಿ ನಿಲಯದಲ್ಲಿನ ಅವ್ಯವಸ್ಥೆಯ ಕುರಿತು ಜಿಲ್ಲಾಧಿಕಾರಿ ಹಾಗೂ ಮಕ್ಕಳ ಹಕ್ಕುಗಳ ಆಯೋಗಕ್ಕೆ ವರದಿ ಸಲ್ಲಿಸಲಾಗುವುದು. ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗುವುದು ಎಂದು ಜಗನ್ನಾಥ ಹಲಮಡಗಿ ತಿಳಿಸಿದರು.

ವಾಡಿ ವಲಯ ಮಟ್ಟದ ಕ್ರೀಡಾಕೂಟದಲ್ಲಿ ಹಲಕರ್ಟಿ ಬಸವೇಶ್ವರ ಶಾಲೆ ವಿದ್ಯಾರ್ಥಿಗಳ ಸಾಧನೆ



ವಾಡಿ,ಸೆ.04-

ವಾಡಿ ವಲಯ ಮಟ್ಟದ ಪ್ರಾಥಮಿಕ ವಿಭಾಗದ ಕ್ರೀಡಾಕೂಟದಲ್ಲಿ ಹಲಕರ್ಟಿ ಬಸವೇಶ್ವರ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿ ಗಮನಾರ್ಹ ಸಾಧನೆ ಮಾಡಿದ್ದಾರೆ.

ನಾಲವಾರ ಗ್ರಾಮದಲ್ಲಿ ಗುರುವಾರ ನಡೆದ ಕ್ರೀಡಾಕೂಟದಲ್ಲಿ ಶಾಲೆಯ ಬಾಲಕರ ಖೋ-ಖೋ ಹಾಗೂ ಬಾಲಕಿಯರ ಖೋ-ಖೋ ತಂಡಗಳು ಪ್ರಥಮ ಸ್ಥಾನ ಪಡೆದುಕೊಂಡಿವೆ. ಬಾಲಕರ ಹಾಗೂ ಬಾಲಕಿಯರ ವಾಲಿಬಾಲ್ ತಂಡಗಳು ದ್ವಿತೀಯ ಸ್ಥಾನ ಗಳಿಸಿವೆ.

ವೈಯಕ್ತಿಕ ವಿಭಾಗದಲ್ಲಿ ಬಾಲಕಿಯರ 200 ಮೀಟರ್ ಓಟದಲ್ಲಿ ರಂಜಿತಾ ಸಂತೋಷ ದ್ವಿತೀಯ, 600 ಮೀಟರ್ ಓಟದಲ್ಲಿ ಪಾರ್ವತಿ ಮಹಾದೇವ ದ್ವಿತೀಯ ಹಾಗೂ ಬಾಲಕರ 100 ಮೀಟರ್ ಓಟದಲ್ಲಿ ಹನೀಫ್ ಮೈನೋದ್ದಿನ್ ದ್ವಿತೀಯ ಸ್ಥಾನ ಪಡೆದು ತಾಲೂಕು ಮಟ್ಟದ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ.

ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಅಧ್ಯಕ್ಷ ಸಿದ್ದರಾಜ ಮಲ್ಕಂಡಿ, ಉಪಾಧ್ಯಕ್ಷ ಭಾಗಣ್ಣ ಬುಕ್ಕಾ, ಕಾರ್ಯದರ್ಶಿ ಶರಣಕುಮಾರ ದೋಶೆಟ್ಟಿ, ಶಿಕ್ಷಕರು ಹಾಗೂ ಗ್ರಾಮಸ್ಥರು ಹರ್ಷ ವ್ಯಕ್ತಪಡಿಸಿದ್ದಾರೆ.

ಶಿಷ್ಯವೇತನಕ್ಕೆ ಅರ್ಜಿ ಆಹ್ವಾನ

ಬೀದರ್,ಸೆ.04-

ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯಿಂದ 2026-27ನೇ ಸಾಲಿನ ಶಿಷ್ಯವೇತನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಅಕಾಡೆಮಿ ರಿಜಿಸ್ಟ್ರಾರ್ ಎನ್. ನರೇಂದ್ರಬಾಬು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕರ್ನಾಟಕ ಸಂಗೀತ, ಹಿಂದೂಸ್ತಾನಿ ಸಂಗೀತ, ನೃತ್ಯ, ಸುಗಮ ಸಂಗೀತ, ಕಥಾಕೀರ್ತನ ಹಾಗೂ ಗಮಕ ಸೇರಿದಂತೆ ಆರು ಕಲಾ ಪ್ರಕಾರಗಳಲ್ಲಿ ಅಭ್ಯಾಸ ಮಾಡುತ್ತಿರುವ 16ರಿಂದ 24 ವರ್ಷದೊಳಗಿನ ಅಭ್ಯರ್ಥಿಗಳು ಶಿಷ್ಯವೇತನಕ್ಕೆ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ ಎಂದು ತಿಳಿಸಿದ್ದಾರೆ. ಈ ಸಾಲಿನ ಶಿಷ್ಯವೇತನಕ್ಕೆ ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆಯನ್ನು ಮೊಬೈಲ್ ವಿಡಿಯೋ ಚಿತ್ರೀಕರಣದ ಮೂಲಕ ನಡೆಸಲು ಅಕಾಡೆಮಿ ನಿರ್ಧರಿಸಿದೆ. ಅಭ್ಯರ್ಥಿಗಳು ಸಂದರ್ಶನಕ್ಕೆ ಹಾಜರಾಗುವ ಬದಲು, ಅರ್ಜಿಯಲ್ಲಿ ನೀಡಿರುವ ಪಠ್ಯಕ್ರಮವನ್ನು ಮೊಬೈಲ್‌ನಲ್ಲಿ ವಿಡಿಯೋ ಚಿತ್ರೀಕರಿಸಿ ಪೆನ್‌ಡ್ರೈವ್‌ನಲ್ಲಿ ಅಳವಡಿಸಬೇಕು. ಭರ್ತಿ ಮಾಡಿದ ಅರ್ಜಿಯೊಂದಿಗೆ ವಿಡಿಯೋ ಇರುವ ಪೆನ್‌ಡ್ರೈವ್ ಅನ್ನು ರಿಜಿಸ್ಟ್ರಾರ್ ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ, ಕನ್ನಡ ಭವನ, 2ನೇ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು560002 ವಿಳಾಸಕ್ಕೆ ಅಂಚೆ ಮೂಲಕ ಅಥವಾ ಖುದ್ದಾಗಿ ಸಲ್ಲಿಸಬೇಕು.

ನಿಮ್ಮೂರು ಸುದ್ದಿ

ಸಂಪಾದಕೀಯ



ಜನಪೀಡಕ ಕೇಸರಿ ಕೇಡಿಗಳಿಗೆ ಕಡೆಗಾಲ ಬಂದಿದೆ, ಎಚ್ಚರಗೊಳ್ಳುತ್ತಿದೆ ಜನಶಕ್ತಿ!

- ಪಾಡ್‌ಕಾಸ್ಟ್ ಒಂದರಲ್ಲಿ ಮಾತನಾಡಿದ ಸ್ವತಂತ್ರ ಭಾರದ್ವಾಜ್ ಎಂಬ ವ್ಯಕ್ತಿ ನೀಡಿದ ಹೇಳಿಕೆಯೀಗ ಭಾರೀ ಸಂಚಲನ ಉಂಟುಮಾಡಿದೆ. ಅಷ್ಟೇ ಅಲ್ಲ ಮೋದಿ ಸರ್ಕಾರದ ನಿಜ ಬಣ್ಣ ಮತ್ತೆ ಬಯಲಾಗಿದೆ. ಜಂತರ್ ಮಂತರ್ ನಲ್ಲಿ ನಡೆದ ಕಾಕ್ರೋಚ್ ಜನತಾ ಪಕ್ಷದ ಪ್ರತಿಭಟನೆಯ ವೇಳೆ ಈತ ವಿದ್ಯಾರ್ಥಿಗಳನ್ನು ಮನಬಂದಂತೆ ಥಳಿಸಿದ್ದ. ಸಿವಿಲ್ ಡ್ರಸ್‌ನಲ್ಲಿದ್ದ ಲಾಠಿ ಹಿಡಿದಿದ್ದ ವ್ಯಕ್ತಿಗಳು ಯಾರು ಎಂಬ ಸಾರ್ವಜನಿಕರ ಪ್ರಶ್ನೆಗೆ ಅವರೆಲ್ಲ ದೆಹಲಿ ಪೊಲೀಸ್ ಎಂದೇ ಸಮರ್ಥಿಸಿಕೊಳ್ಳಲಾಗಿತ್ತು. ಸುಪ್ರೀಮ್ ಕೋರ್ಟಿಗೂ ಇದೇ ಸುಳ್ಳು ಹೇಳಿದ್ದಾರೆ ದೆಹಲಿ ಪೊಲೀಸರು.

ಸಂಸತ್ತಿನ ಮುಂಗಾರು ಅಧಿವೇಶನ ಶುರುವಾಗುವ ಜು. 20ರಂದು ಮುಂಜಾನೆ ಸಿಜೆಪಿ ಕಾರ್ಯಕರ್ತರು ಜಂತರ್ ಮಂತರ್‌ನಿಂದ ಹೊರಟು ಸಂಸತ್ ಭವನ ಕಡೆಗೆ ಶಾಂತಿಯುತ ಹೆಜ್ಜೆ ಹಾಕಿದ್ದರು. ಪೊಲೀಸರು ಸಂಸದ್ ಭವನ್ ಚಲೋಗೆ ಅನುಮತಿ ನೀಡಿರಲಿಲ್ಲ. ಆದರೆ ಭಾರೀ ತಯಾರಿ ಮಾಡಿಕೊಂಡಿದ್ದರು. ಅದರಲ್ಲಿ ಮೊಳೆಗಳನ್ನು ಹೊಡೆದ ಲಾಠಿಗಳು, ಟ್ರಕ್ ಭರ್ತಿ ದಪ್ಪ ಕಲ್ಲುಗಳನ್ನು ತುಂಬಿ ರಸ್ತೆಯ ಬದಿಯಲ್ಲೇ ನಿಲ್ಲಿಸಿದ್ದು, ಅಷ್ಟೇ ಏಕೆ ಬಿಜೆಪಿ ಬೆಂಬಲಿತ ಪುಂಡರ ಕೈಗೆ ಲಾಠಿ ಕೊಟ್ಟು ಪ್ರತಿಭಟನಾಕಾರರನ್ನು ಹೊಡೆಯಲು ಬಿಟ್ಟಿದ್ದರು. ರಸ್ತೆಗೆ ಬ್ಯಾರಿಕೇಡ್ ಇಟ್ಟು ಅವುಗಳನ್ನು ಬೆಸೆದು ಲಾಕ್ ಮಾಡಿದ್ದರೂ ಯುವಜನರ ಆಕ್ರೋಶದ ಕಟ್ಟೆ ಒಡೆದಿತ್ತು. ಯಾವಾಗ ಬ್ಯಾರಿಕೇಡ್ ಹಾರಿ ಸಂಸತ್ತಿನ ಕಡೆಗೆ ಪ್ರತಿಭಟನಾಕಾರರು ಓಟಕಿತ್ತರೋ ಆಗ ಬೀದಿಗಿಳಿದ ಪುಂಡರ ತಂಡ ವಿದ್ಯಾರ್ಥಿಗಳ ಮೇಲೆ ಅಮಾನುಷವಾಗಿ ಥಳಿಸಿದ್ದರು. ಕಲ್ಲುಗಳನ್ನು ಎಸೆದಿದ್ದರು. ಅನೇಕ ವಿದ್ಯಾರ್ಥಿಗಳು ಗಾಯಗೊಂಡರೂ ಯೂನಿಫಾರಂ ಇಲ್ಲದ ಲಾಠಿ ಹಿಡಿದ ದುಷ್ಟರ ಬಗ್ಗೆ ವಿಡಿಯೋ ಮಾಡಿದ್ದರು. ಪೆಲೆಟ್ ಗನ್ ಪ್ರಯೋಗಿಸಲಾಯಿತು. ವಿಪಕ್ಷಗಳು ಗೃಹಸಚಿವ ಅಮಿತ್ ಶಾ ರಾಜೀನಾಮೆಗೆ ಒತ್ತಾಯಿಸಿದರೂ ಪ್ರಯೋಜನವಾಗಲಿಲ್ಲ. ಆದರೆ ಸುಪ್ರೀಂ ಕೋರ್ಟು, ಸಿಜೆಪಿ ಪ್ರತಿಭಟನಾಕಾರರ ಮೇಲಿನ ಎಫ್‌ಐಆರ್ ರದ್ದುಗೊಳಿಸಿದೆ. ಎರಡು ಸಾವಿರಕ್ಕೂ ಹೆಚ್ಚು ಮಂದಿ ಕ್ರಿಮಿನಲ್ ಹಿನ್ನೆಲೆಯವರು ಪ್ರತಿಭಟನೆಯಲ್ಲಿದ್ದರು ಎಂದು ದೆಹಲಿ ಪೊಲೀಸರು ಸುಪ್ರೀಂ ಕೋರ್ಟ್‌ಗೆ ವರದಿ ನೀಡಿದ್ದರು.

ಪಾಡ್‌ಕಾಸ್ಟ್ ಒಂದರಲ್ಲಿ ಮಾತನಾಡಿದ ಸ್ವತಂತ್ರ ಭಾರದ್ವಾಜ್ ಎಂಬ ವ್ಯಕ್ತಿ ನೀಡಿದ ಹೇಳಿಕೆಯೀಗ ಭಾರೀ ಸಂಚಲನ ಉಂಟುಮಾಡಿದೆ. ಅಷ್ಟೇ ಅಲ್ಲ ಮೋದಿ ಸರ್ಕಾರದ ನಿಜ ಬಣ್ಣ ಮತ್ತೆ ಬಯಲಾಗಿದೆ. ಜಂತರ್ ಮಂತರ್ ನಲ್ಲಿ ನಡೆದ ಕಾಕ್ರೋಚ್ ಜನತಾ ಪಕ್ಷದ ಪ್ರತಿಭಟನೆಯ ವೇಳೆ ಈತ ವಿದ್ಯಾರ್ಥಿಗಳನ್ನು ಮನಬಂದಂತೆ ಥಳಿಸಿದ್ದ. ಸಿವಿಲ್ ಡ್ರಸ್‌ನಲ್ಲಿದ್ದ ಲಾಠಿ ಹಿಡಿದಿದ್ದ ವ್ಯಕ್ತಿಗಳು ಯಾರು ಎಂಬ ಸಾರ್ವಜನಿಕರ ಪ್ರಶ್ನೆಗೆ ಅವರೆಲ್ಲ ದೆಹಲಿ ಪೊಲೀಸ್ ಎಂದೇ ಸಮರ್ಥಿಸಿಕೊಳ್ಳಲಾಗಿತ್ತು. ಸುಪ್ರೀಮ್ ಕೋರ್ಟಿಗೂ ಇದೇ ಸುಳ್ಳು ಹೇಳಿದ್ದಾರೆ ದೆಹಲಿ ಪೊಲೀಸರು. ಕೆಲವರು ಪೊಲೀಸ್ ಸಮವಸ್ತ್ರದಲ್ಲಿದ್ದರೂ ಅವರ ಹೆಸರಿನ ಬ್ಯಾಜ್ ಕಿತ್ತು ಹಾಕಲಾಗಿತ್ತು. ಅದನ್ನೂ ಕೆಲವರು ಕಂಟೆಂಟ್ ಕ್ರಿಯೇಟರ್‌ಗಳು ಪ್ರಶ್ನೆ ಮಾಡಿದ್ದರು. ಆದರೆ ಇದೀಗ ಪಾಡ್ ಕಾಸ್ಟ್ ಒಂದರಲ್ಲಿ ಸ್ವತಂತ್ರ ಭಾರದ್ವಾಜ್ ಎಂಬ ಕೇಡಿ ಅಸಲಿ ವಿಷಯ ಬಾಯಿಬಿಟ್ಟಿದ್ದಾನೆ.

ಈತನ ಮುಂಗೈ ಲೋಹದ ಬಳೆಯ ಏಟಿಗೆ ದಲಿತ ಸಮುದಾಯದ ಸಂಜಯ್ ಕುಮಾರ್ ಎಂಬುವರ ತಲೆ ಒಡೆದಿತ್ತು. ಸುಮಾರು 60 ಹೊಲಿಗೆಗಳನ್ನು ಹಾಕಲಾಗಿದೆ ಎಂದು ಹೇಳಲಾಗಿತ್ತು. ಇವರ ಮಗಳು ಕಂಟೆಂಟ್ ಕ್ರಿಯೇಟರ್ ನಿಶು ಆಜಾದ್ ತಮ್ಮ ತಂದೆಗೆ ನ್ಯಾಯ ಕೊಡುವಂತೆ ಪೊಲೀಸ್ ಠಾಣೆಯ ಮುಂದೆ ಅತ್ತಿದ್ದಳು. ಈ ಸ್ವತಂತ್ರ ಭಾರದ್ವಾಜನನ್ನು ಸಿವಿಲ್ ಡ್ರೆಸ್ ನಲ್ಲಿರುವ ದೆಹಲಿ ಪೊಲೀಸ್ ಎಂದೇ ನಂಬಿಸಲಾಗಿತ್ತು.

ಆತ ಪಾಡ್ ಕಾಸ್ಟ್‌ನಲ್ಲಿ ತಾನು ಮಾಡಿದ ಕೊಲೆಯತ್ನವನ್ನು ಶೌರ್ಯದ ರೀತಿಯಲ್ಲಿ ಬಣ್ಣಿಸಿಕೊಂಡಿದ್ದಾನೆ. ನಿಶು ಅಜಾದ್ ಳ ತಂದೆಯ ತಲೆ ಒಡೆದಿದ್ದೇನೆ. ಅವರ ತಲೆಗೆ 60 ಹೊಲಿಗೆಗಳು ಬಿದ್ದಿವೆ. ಅವರು ಆಂಬುಲೆನ್ಸ್ ನಲ್ಲಿದ್ರು. ಸಾಯುವ ಸ್ಥಿತಿಯಲ್ಲಿದ್ದರು. ನನ್ನ ಮೇಲೆ ಹತ್ಯೆಗೆ ಯತ್ನ ಆರೋಪದಡಿ ಸೆಕ್ಷನ್ 307ರ ಅನ್ವಯ ಕೇಸು ದಾಖಲಿಸಬಹುದಿತ್ತು. ಆದರೆ, ನಾನು ಮರುದಿನವೇ ಪೊಲೀಸ್ ಠಾಣೆಯಿಂದ ಹೊರ ಬಂದೆ. ಜೈಲಿಗೂ ಹೋಗಲಿಲ್ಲ. ದೆಹಲಿ ಸಚಿವ ಕಪಿಲ್ ಮಿಶ್ರ ಅವರ ಫೋನ್ ಕರೆ ಬಂತು. ಪೊಲೀಸರು ನನ್ನನ್ನು ಬಿಡುಗಡೆಗೊಳಿಸಿದರು. ಕಪಿಲ್ ಮಿಶ್ರ, ಚಿರಾಗ್ ಪಾಸ್ವಾನ್ ನನ್ನ ದೊಡ್ಡಣ್ಣನಂತೆ. ಮೋದಿ ಅವರೂ ನನ್ನ ದೊಡ್ಡಣ್ಣನಂತೆ ಎಂದು ಹೇಳಿದ್ದಾನೆ.

ಅಷ್ಟೇ ಅಲ್ಲ ''ನನ್ನ ಬೂಟು, ಲಾಠಿ ಎಲ್ಲಾ ದೆಹಲಿ ಪೊಲೀಸರದ್ದು. ನಾನು ಯಾವುದೇ ಫಾರ್ಮು ತುಂಬದೆ, ಪೊಲೀಸರಂತೆ ತಿರುಗುತ್ತೇನೆ'' ಎಂದು ಆತ ಹೇಳಿದ್ದಾನೆ. ಇದು ಈ ದೇಶದ ಚುಕ್ಕಾಣಿ ಹಿಡಿದವರ ನೀಚತನವನ್ನು ಎತ್ತಿ ತೋರಿಸುತ್ತದೆ. ತಾವು ಶಾಶ್ವತವಾಗಿ ಅಧಿಕಾರದಲ್ಲಿರಬೇಕು. ಅದಕ್ಕಾಗಿ ವಿಪಕ್ಷಗಳನ್ನು ಮುಗಿಸಬೇಕು, ವಿಪಕ್ಷ ನಾಯಕರ ವಿರುದ್ಧ ಸುಳ್ಳು ಕೇಸುಗಳನ್ನು ಜಡಿಯುವುದು, ಇಡಿ/ಸಿಬಿಐ ಛೂ ಬಿಟ್ಟು ಮಟ್ಟ ಹಾಕುವುದು, ವಿಪಕ್ಷಗಳ ಪ್ರಭಾವಿ ಮುಖಂಡರನ್ನು ಬಿಜೆಪಿಗೆ ಸೇರ್ಪಡೆಗೊಳಿಸಿಕೊಳ್ಳುವುದು, ಸಂಘಟನೆಗಳು ಪ್ರತಿಭಟನೆ ಮಾಡದಂತೆ ತಡೆಯುವುದು ಹೀಗೆ ಪ್ರಜಾಪ್ರಭುತ್ವವನ್ನು ಹತ್ತಿಕ್ಕಿಯಾದರೂ ಅಧಿಕಾರ ಉಳಿಸಿಕೊಳ್ಳಲು ಬಿಜೆಪಿ ಆರೆಸ್ಸೆಸ್ ಹೊರಟಿದೆ. ಅದರ ಕರಾಳತೆಯನ್ನು ಭಾರದ್ವಾಜನ ಮಾತು ತೆರೆದಿಟ್ಟಿದೆ.

ತಂದೆಯನ್ನು (ಸಂಜಯಕುಮಾರ್ ಆಜಾದ್) ಚಚ್ಚಿದ್ದೇನೆ, ಮಗಳನ್ನು (ನಿಶೂ ಆಜಾದ್) ಥಳಿಸಲಿದ್ದೇವೆ. ಅದಕ್ಕೆ ಯೋಜನೆ ಹೂಡಿದ್ದೇವೆ ಎಂಬ ಬೆದರಿಕೆಯನ್ನೂ ಹಾಕಿದ್ದಾನೆ. ಭಾರದ್ವಾಜನ ಕೂದಲನ್ನೂ ಕೊಂಕಿಸಲು ಒಪ್ಪದಿದ್ದ ದೆಹಲಿ ಪೊಲೀಸರು ಕಡೆಗೂ ಜನ ಪ್ರತಿಭಟನೆಯ ಶಕ್ತಿಗೆ ಮಣಿದಿದ್ದಾರೆ. ಶುಕ್ರವಾರ ಸಂಜೆಯ ವೇಳೆಗೆ ಈ ಕೇಸರಿ ಕೇಡಿಯನ್ನು ಬಂಧಿಸಿದ್ದಾರೆ.

2020ರಲ್ಲಿ ದೆಹಲಿಯಲ್ಲಿ ನಡೆದ ಸಿಎಎ/ಎನ್‌ಆರ್‌ಸಿ ವಿರುದ್ಧದ ಪ್ರತಿಭಟನೆಯಲ್ಲೂ ಇದೇ ತರ ಸಂಘಪರಿವಾರದ ದುಷ್ಟರು ಪ್ರತಿಭಟನಾ ಕಾರರ ಮೇಲೆ ದಾಳಿ ನಡೆಸಿದ್ದರು. ಶಾಹೀನ್ ಬಾಗ್‌ನಲ್ಲಿ ಪ್ರತಿಭಟನಾಕಾರರಿಗೆ ಯುವಕನೊಬ್ಬ ಪೊಲೀಸರ ಸಮ್ಮುಖದಲ್ಲಿಯೇ ಪಿಸ್ತೂಲು ತೋರಿಸಿದ್ದ. ಗೋಲಿ ಮಾರೋ ಸಾಲೋಂಕೋ ಎಂದು ಅಬ್ಬರಿಸಿದ ವ್ಯಕ್ತಿ ದೆಹಲಿ ಸರ್ಕಾರದಲ್ಲಿ ಮಂತ್ರಿ!

ನೀಟ್ ಪರೀಕ್ಷಾ ಅಕ್ರಮದ ವಿರುದ್ಧ ನಡೆದ ವಿದ್ಯಾರ್ಥಿಗಳ ಪ್ರತಿಭಟನೆಯಲ್ಲಿ 2,873 ಕ್ರಿಮಿನಲ್ ವ್ಯಕ್ತಿಗಳು ಭಾಗಿಯಾಗಿದ್ದರು ಎಂದು ದೆಹಲಿ ಪೊಲೀಸರು ಸುಪ್ರೀಂ ಕೋರ್ಟ್‌ಗೆ ತಿಳಿಸಿದ್ದರು. ಕ್ರಿಮಿನಲ್ ಹಿನ್ನೆಲೆ ಹೊಂದಿರುವವರ ವಿರುದ್ಧ ಮುಂದಿನ ಕ್ರಮ ಕೈಗೊಳ್ಳಲು ಸರ್ಕಾರಕ್ಕೆ ಸುಪ್ರೀಂ ಕೋರ್ಟ್ ಅವಕಾಶ ನೀಡಿತ್ತು. ಆದರೆ ದೆಹಲಿ ಪೊಲೀಸರು ಮುಖ ಗುರುತಿಸುವ ತಂತ್ರಜ್ಞಾನ (-) ಮೂಲಕ ಗುರುತಿಸಿರುವ 2,873 ಮಂದಿ ಆರೋಪಿಗಳ ಪೈಕಿ ಕನಿಷ್ಠ 25 ಮಂದಿ ಅಂದು ಜೈಲಿನಲ್ಲಿದ್ದರು ಎಂಬುದು ಪೊಲೀಸ್, ಜೈಲು ಮತ್ತು ನ್ಯಾಯಾಲಯದ ದಾಖಲೆಗಳಿಂದ ಬಹಿರಂಗವಾಗಿದೆ.

ಆದರೆ, ಮುಖ ಗುರುತಿಸುವ ತಂತ್ರಜ್ಞಾನದ ಆಧಾರದ ಮೇಲೆ ಮಾತ್ರ ಕ್ರಮ ಕೈಗೊಳ್ಳದೆ, ಸ್ಥಳ ಪರಿಶೀಲನೆ ( ) ಬಳಿಕವೇ ಕ್ರಮ ಕೈಗೊಳ್ಳುವುದಾಗಿ ಪೊಲೀಸರು ಸ್ಪಷ್ಟಪಡಿಸಿದ್ದಾರೆ.

ಶಾಂತಿಯುತವಾಗಿ ಪ್ರತಿಭಟನೆ ನಡೆಸುತ್ತಿರುವ ಸಿಜೆಪಿ ಮತ್ತು ಬೇರೆ ಬೇರೆ ಸಂಘಟನೆಗಳಿಗೆ ಕಾನೂನಿನ ಕುಣಿಕೆಗೆ ಹಾಕಲು ಮೋದಿ ಸರ್ಕಾರ, ಗೃಹಸಚಿವ ಅಮಿತ್ ಶಾ ಕುತಂತ್ರ ಮಾಡಿ ಕ್ರಿಮಿನಲ್‌ಗಳನ್ನು ಜಂತರ್ ಮಂತರ್‌ಗೆ ಕಳುಹಿಸಿದ್ದರೇ? ಎಂಬ ಕಾಂಗ್ರೆಸ್ ವಕ್ತಾರೆ ಸುಪ್ರಿಯಾ ಶ್ರೀನೇತ್ ಅವರ ಅನುಮಾನ ಸರಿಯಾಗಿದೆ. ಇಂತಹ ಅನುಮಾನ ಬರುವಂತೆ ಮೋದಿ ಸರ್ಕಾರ ಕಳೆದ ಹನ್ನೆರಡು ವರ್ಷಗಳಿಂದ ಹತ್ತಾರು ಬಾರಿ ನಡೆದುಕೊಂಡಿದೆ. ವಿದ್ಯಾರ್ಥಿಗಳನ್ನು ದಿಮಾಗಿ ನಕ್ಸಲರು ಎಂದು ಕೆಂಪುಕೋಟೆಯ ಮೇಲಿಂದ ಅದೂ ಸ್ವಾತಂತ್ರ್ಯೋತ್ಸವದ ಭಾಷಣದಲ್ಲಿ ಪ್ರಧಾನಿ ಮೋದಿ ಹೇಳಿದ್ದಾರೆ. ತಮ್ಮ ಪಕ್ಷದಲ್ಲಿ ಅತ್ಯಂತ ಹೆಚ್ಚು ಕ್ರಿಮಿನಲ್‌ಗಳು, ಅತ್ಯಾಚಾರದ ಆರೋಪಿಗಳು, ಭ್ರಷ್ಟಾಚಾರಿಗಳು ತುಂಬಿ ತುಳುಕುತ್ತಿದ್ದಾರೆ. ಮಾತೆತ್ತಿದರೆ ಕಡಿ, ಕೊಲ್ಲು ಎಂಬ ಭಾಷೆ ಬಳಸುವ ನಾಯಕರೇ ತುಂಬಿದ್ದಾರೆ.

ಐದು ವರ್ಷಗಳ ಹಿಂದೆ ದೆಹಲಿಯಲ್ಲಿ ಒಂದೂವರೆ ವರ್ಷಗಳ ಕಾಲ ನಡೆದ ರೈತ ವಿರೋಧಿ ಕಾಯ್ದೆಗಳ ವಿರುದ್ಧ ರೈತರು ಬೃಹತ್ ಪ್ರತಿಭಟನೆ ನಡೆಸಿದಾಗಲೂ ಅದನ್ನು ಹತ್ತಿಕ್ಕಲು ನಾನಾ ಬಗೆಯ ಹತಾರಗಳನ್ನು ಪ್ರಯೋಗಿಸಿದ್ದರು. ರೈತರನ್ನು ನಕಲಿ ರೈತರು, ಖಲಿಸ್ತಾನಿಗಳು, ವಿದೇಶದ ಫಂಡ್ ಪಡೆದವರು ಎಂದೆಲ್ಲ ಆರೋಪಿಸಿದ್ದರು. ಕಡೆಗೂ ಮೋದಿ ಸರ್ಕಾರ ಮಣಿಯಲೇಬೇಕಾಯ್ತು. ಸಿಜೆಪಿ ಪ್ರತಿಭಟನೆಯನ್ನೂ ಆರಂಭದಲ್ಲಿ ಲಘುವಾಗಿ ಪರಿಗಣಿಸಿದ್ದ ಮೋದಿ ಸರ್ಕಾರ, ಈ ಪ್ರತಿಭಟನೆಗೆ ಜನಬೆಂಬಲ ದೊರೆಯುತ್ತಿದ್ದಂತೆ ಕ್ರಿಮಿನಲ್‌ಗಳನ್ನು ಬಿಟ್ಟು ಕೆಡಿಸಲು ಯತ್ನಿಸಿತ್ತು. ಆದರೆ, ಜೆನ್-ಝಿಗಳಿಗೆ ಕೊನೆಗೂ ಮಣಿಯಲೇಬೇಕಾಯ್ತು.

ಇನ್ನಾದರೂ ತನ್ನ ದುಷ್ಟ ನಡವಳಿಕೆಯನ್ನು ಬಿಜೆಪಿ ಸರ್ಕಾರ ನಿಲ್ಲಿಸಬೇಕು. ಸರ್ಕಾರದ ದುರಾಡಳಿತದ ವಿರುದ್ಧ ದೇಶವಾಸಿಗಳು ದಂಗೆ ಏಳಿದರೆ ಅವರ ಮಾತುಗಳಿಗೆ ಕಿವಿಯಾಗಬೇಕೇ ಹೊರತು, ಅವರ ಧ್ವನಿಯನ್ನು ಹತ್ತಿಕ್ಕುವ ದುಷ್ಟ ಪ್ರಯತ್ನ ನಿಲ್ಲಿಸಬೇಕು.

ಬರಪೀಡಿತ ತಾಲೂಕು ಘೋಷಣೆ: ಸರ್ಕಾರದ ಮಾನದಂಡಗಳು ಎಷ್ಟು ಸಮರ್ಪಕ?

ಕಳೆದ ಒಂದೆರಡು ತಿಂಗಳಿನ ಅವಧಿಯಲ್ಲಿ ಹಾವೇರಿ ಮತ್ತು ರಟ್ಟಿಹಳ್ಳಿ ತಾಲೂಕುಗಳಲ್ಲಿ ಇಬ್ಬರು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಹೆಚ್ಚುತ್ತಿರುವ ಕೃಷಿ ವೆಚ್ಚ, ಕೃಷಿ ಉತ್ಪನ್ನಗಳಿಗೆ ಸಿಗದ ನ್ಯಾಯದ ಬೆಲೆ, ನಿರಂತರ ಇಳುವರಿ ಕುಸಿತಗಳಿಂದ ಜರ್ಜರಿತರಾಗಿರುವ ರೈತರು ಬದುಕುವುದೇ ದುಸ್ತರವಾಗಿರುವ ಈ ಕಾಲಘಟ್ಟದಲ್ಲಿ ಸರ್ಕಾರಗಳು ರೈತರ ನೆರವಿಗೆ ನಿಲ್ಲುವುದು ಇನ್ಯಾವಾಗ?

ಇತ್ತೀಚೆಗೆ ರಾಜ್ಯ ಸರ್ಕಾರ ಬರಪೀಡಿತ ತಾಲೂಕುಗಳ ಪಟ್ಟಿ ಬಿಡುಗಡೆ ಮಾಡಿದೆ. ಇದೇನು ತರಾತುರಿ ಅಥವಾ ಒತ್ತಡ ಶಿಫಾರಸು ಆಧರಿಸಿ ಆಯ್ಕೆಯಾಗಿರುವ ಪಟ್ಟಿಯೇ? ಅಥವಾ ಏನಾದರೂ ಮಾನದಂಡಗಳನ್ನು ಆಧರಿಸಿ, ಕೂಲಂಕುಶವಾಗಿ ಪರಿಶೀಲನೆ ನಡೆಸಿ ಅಂತಿಮಗೊಂಡಿರುವ ನಿರ್ಧಾರವೇ? ಎಂಬ ಬಗ್ಗೆ ಹಲವು ಅನುಮಾನಗಳು ಏಳುವಂತಾಗಿದೆ.

ಹಾವೇರಿ ಜಿಲ್ಲೆಯ ಯಾವುದೇ ತಾಲೂಕನ್ನಾದರೂ ಬರಪೀಡಿತ ತಾಲೂಕುಗಳ ಪಟ್ಟಿಗೆ ಸೇರದಿರುವುದನ್ನು ನೋಡಿದರೆ, ಜಿಲ್ಲೆಯ ಶಾಸಕರಾರೂ ಅಂಥ ಬೇಡಿಕೆಯನ್ನೇ ಸಲ್ಲಿಸಿರಲಿಕ್ಕಿಲ್ಲ ಅಥವಾ ಅಂಥ ರಾಜಕೀಯ ಒತ್ತಡ ಸರ್ಕಾರದ ಮೇಲೆ ಬಿದ್ದಿರಲಿಕ್ಕಿಲ್ಲ ಎಂಬುದು ಸ್ಪಷ್ಟವಾಗುತ್ತಿದೆ. ಏಕೆಂದರೆ, ಬರಪೀಡಿತ ತಾಲೂಕುಗಳ ಪಟ್ಟಿ ನೋಡಿದಾಗ ರಾಜ್ಯಸರ್ಕಾರವು ಬರಪೀಡಿತ ಪ್ರದೇಶ ಘೋಷಣೆಗೆ ಅನುಸರಿಸುತ್ತದೆ ಎನ್ನಲಾದ ಮಾನದಂಡಗಳು ಏನು? ಅವು ಎಷ್ಟರಮಟ್ಟಿಗೆ ಸಮರ್ಪಕ? ಮತ್ತು ವೈಜ್ಞಾನಿಕ? ಎಂಬ ಪ್ರಶ್ನೆಗಳೂ ಬರಲಾರಂಭಿಸಿವೆ.

ಪಶ್ಚಿಮ ನೈರುತ್ಯ ಮಾರುತಗಳು ಹಾವೇರಿ ಜಿಲ್ಲೆಯನ್ನು ಪ್ರವೇಶಿಸುವುದೇ ಉತ್ತರ ಕನ್ನಡ ಜಿಲ್ಲೆಯ ಶಿರಸಿ, ಸಿದ್ದಾಪುರ, ಮುಂಡಗೋಡ ಹಾಗೂ ಯಲ್ಲಾಪುರ ಭಾಗದಿಂದ. ಆದರೂ ಪಶ್ಚಿಮಘಟ್ಟದ ಕೆಳಗಿನ ಪ್ರದೇಶಗಳಾದ ಯಲ್ಲಾಪುರ ಮತ್ತು ಮುಂಡಗೋಡ ತಾಲೂಕುಗಳನ್ನು ಬರಪೀಡಿತವೆಂದು ಘೋಷಿಸಿರುವ ರಾಜ್ಯ ಸರ್ಕಾರವು ಬಯಲು ಪ್ರದೇಶವಾದ ಹಾವೇರಿ ಜಿಲ್ಲೆಯ ಒಂದೇ ಒಂದು ತಾಲೂಕನ್ನೂ ಬರಪೀಡೀತ ತಾಲೂಕುಗಳ ಪಟ್ಟಿಗೆ ಸೇರಿಸದೇ ಇರುವುದು ಯಾವ ನ್ಯಾಯ?

ನಿಜಕ್ಕೂ ಇದು ಆಶ್ಚರ್ಯದ ಸಂಗತಿಯೇ ಸರಿ. ಬರಪೀಡಿತವೆಂಬ ಘೋಷಣೆಗೆ ಸರ್ಕಾರ ಅನುಸರಿಸುವ ಮಾನದಂಡಗಳ ಬಗ್ಗೆಯೇ ಅನುಮಾನ ಮೂಡಿಸುವ ನಡೆ ಇದು.

ಹಾವೇರಿ ಜಿಲ್ಲೆಯಲ್ಲಿ ಪ್ರಸಕ್ತ ಮುಂಗಾರಿನಲ್ಲಿ ಶೇ.40ಕ್ಕಿಂತ ಹೆಚ್ಚು ಮಳೆ ಕೊರತೆಯಾಗಿರುವುದಾಗಿ ಅಂಕಿ ಅಂಶಗಳಿಂದ ಸಾಬೀತಾಗಿದೆ. ಶೇ.60ಕ್ಕಿಂತ ಹೆಚ್ಚು ಮಳೆ ಅಭಾವ ಇರಬೇಕು ಎಂಬ ಮಾನದಂಡವನ್ನು ಒಪ್ಪೋಣ. ಆದರೆ, ಶೇ.40ಕ್ಕಿಂತ ಹೆಚ್ಚು ಮಳೆ ಕೊರತೆಯಾದರೆ ಬೆಳೆಗಳು ಸಮೃದ್ಧವಾಗಿ ಬೆಳಯುತ್ತವೆ ಎಂದರ್ಥವೆ?

ನಿರಂತರವಾಗಿ 21 ದಿನಗಳವರೆಗೆ ಮಳೆ ಕೈ ಕೊಟ್ಟಿರಬೇಕು ಎಂಬುದೂ ಸರಿಯೇ. ಆದರೆ, ವಾರದಲ್ಲಿ ಎರಡು ದಿನ 0.05 ಮೀ. ಮೀ ಮಳೆ ಬಿದ್ದರೆ ಬೆಳೆಗಳಿಗೆ ಅದು ಸಾಕಷ್ಟು ತೇವಾಂಶ ಒದಗಿಸುತ್ತದೆ ಎಂದು ಅರ್ಥವೇ?

ನಿಗದಿ ಪಡಿಸಿದ ಗುರಿಗಿಂತ ಶೇ.75ಕ್ಕಿಂತ ಕಡಿಮೆ ಪ್ರದೇಶದಲ್ಲಿ ಬಿತ್ತನೆ ಆಗಿರಬೇಕು. ಬಿತ್ತನೆಯಾದ ಬೆಳೆಗಳಲ್ಲಿ ಶೇ.50ರಷ್ಟು ಬೆಳೆ ನಾಶವಾಗಿರಬೇಕು ಎಂಬ ಮಾನದಂಡಗಳನ್ನು ನೋಡುವುದಾದರೆ, ರಾಜ್ಯ ಸರ್ಕಾರ ಬರಪೀಡಿತ ಪ್ರದೇಶಗಳ ಪಟ್ಟಿ ಬಿಡುಗಡೆಗೆ ಇನ್ನು ಸ್ವಲ್ಪ ದಿನ ಕಾದಿದ್ದರೆ ಸೂಕ್ತವಾಗುತಿತ್ತು. ಏಕೆಂದರೆ, ಅಲ್ಲಿವರೆಗೆ ಸಂಪೂರ್ಣವಾಗಿ ನಾಶವಾಗಿರವ ಪ್ರದೇಶಗಳ ಕರಾರುವಕ್ಕಾದ ಮಾಹಿತಿ ಸಿಗುತಿತ್ತು!



ಹಾವೇರಿ ಜಿಲ್ಲೆಯಲ್ಲಿ ಹಿರೇಕೆರೂರು, ರಟ್ಟಿಹಳ್ಳಿ, ಬ್ಯಾಡಗಿ, ಹಾನಗಲ್ಲು ಮತ್ತು ಶಿಗ್ಗಾವಿ ಮಲೆನಾಡಿನ ತಾಲೂಕುಗಳಾಗಿದ್ದು, ಮುಂಗಾರು ಪೂರ್ವ ಮಳೆ ಇಲ್ಲಿ ವಾರ್ಷಿಕ ವಾಡಿಕೆಗಿಂತ ತೀರಾ ಕಡಿಮೆಯಾಗಿದೆ. ಪಶ್ಚಿಮ ಮಾರುತಗಳು ಈ ತಾಲೂಕುಗಳ ಮೂಲಕವೇ ಜಿಲ್ಲಾದ್ಯಂತ ಪಸರಿಸುತ್ತವೆ. ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರ ಮತ್ತು ಮುಂಡಗೋಡ ತಾಲೂಕುಗಳು ಬರಪೀಡಿತ ಆಗುವುದಾದರೆ, ಆ ಪ್ರದೇಶದಿಂದಲೇ ಮಳೆ ಮಾರುತಗಳನ್ನು ಪಡೆವ ಹಾವೇರಿ ಜಿಲ್ಲೆಯ ಈ ತಾಲೂಕುಗಳು ಏಕೆ ಬರಪೀಡಿತ ಪ್ರದೇಶಗಳಲ್ಲ?

ಬಿತ್ತುವ ಹಂಗಾಮಿನಲ್ಲಿ ಬಿತ್ತನೆಗೆ ಹದವರಿತ ತೇವಾಂಶ ಸಿಕ್ಕ ಮೇಲೆಯೆ ರೈತರು ಬಿತ್ತನೆ ಮಾಡುತ್ತಾರೆ. ಎರಡು ಮೂರು ವಾರಗಳ ಕಾಲ ಅಂದರೆ, ಬೆಳೆಸಾಲು ಅಥವಾ ಎಡೆ ಹೊಡೆಯುವ ತನಕ ಬೆಳೆಗೆ ಹೆಚ್ಚು ತೇವಾಂಶದ ಅಗತ್ಯ ಇರುವುದಿಲ್ಲ. ಎಡೆ ಹೊಡೆದು ಗೊಬ್ಬರ ಹಾಕಿದ ಮೇಲೆ ಬೆಳೆಗಳಿಗೆ ಹೆಚ್ಚು ಮಳೆ ಆದಷ್ಟು ಉತ್ತಮ. ಬಿತ್ತನೆಯ ನಂತರ ಒಂದು ತಿಂಗಳಿನ ನಂತರ ಸಾಕಷ್ಟು ಮಳೆಯಾಗದಿದ್ದರೆ ಅಥವಾ ಮಳೆ ಅಭಾವ ಆದರೆ ಇಳುವರಿ ಕುಸಿತ ಕಾಣುವುದಿಲ್ಲವೇ? ಮತ್ತೆ ಇಂಥ ಮಾನದಂಡಗಳು ಎಷ್ಟು ವೈಜ್ಞಾನಿಕ? ಮತ್ತು ನಿಖರ?

ಹಾವೇರಿ ಜಿಲ್ಲೆಯ ಉಳಿದ ತಾಲೂಕುಗಳಾದ ರಾಣೇಬೆನ್ನೂರು, ಹಾವೇರಿ ಹಾಗೂ ಸವಣೂರು ಸಂಪೂರ್ಣ ಬಯಲು ಸೀಮೆಯಾಗಿದ್ದು, ಕನಿಷ್ಠ ಈ ತಾಲೂಕುಗಳನ್ನಾದರೂ ಬರಪೀಡಿತ ತಾಲೂಕುಗಳ ಪಟ್ಟಿಗೆ ಸೇರಿಸದೇ ಇರುವುದು ಕುಚೋದ್ಯವೇ ಸರಿ. ಮುಂಗಾರು ಪೂರ್ವ ಮಳೆ ಮಾರುತಗಳು ಈ ತಾಲೂಕುಗಳಲ್ಲಿ ಹೆಚ್ಚು ತೂಗುತ್ತವೆ. ಹಾಗೆಂದೇ ಇಲ್ಲಿ ನಿಗದಿತ ಗುರಿಗಿಂತ ಹೆಚ್ಚು ಬಿತ್ತನೆಯಾಗಿದೆ. ಪಶ್ಚಿಮ ಮಾರುತಗಳು ಈ ಪ್ರದೇಶದಲ್ಲಿ ಮಳೆ ಸುರಿಸುವ ಪ್ರಮಾಣ ಮಲೆನಾಡಿಗೆ ಹೋಲಿಸಿದರೆ ಇಲ್ಲಿ ಕಡಿಮೆಯೇ. ವಸ್ತು ಸ್ಥಿತಿ ಹೀಗಿರುವಾಗ ಈ ಸಂಗತಿಯನ್ನು ಅರ್ಥ ಮಾಡಿಕೊಳ್ಳದಿದ್ದರೆ ಹೇಗೆ?

ಇತ್ತೀಚಿನ ವರ್ಷಗಳಲ್ಲಿ ಹಾವೇರಿ ಜಿಲ್ಲಾದ್ಯಂತ ಗೋವಿನ ಜೋಳ ಬೆಳೆಯೇ ಪ್ರಮುಖ ಬೆಳೆಯಾಗಿದೆ. ಗೋವಿನ ಜೋಳ ಸಹಜವಾಗಿ ಹೆಚ್ಚು ಮಳೆ/ತೇವಾಂಶ ಬೇಡುವ ಬೆಳೆ. ಹೀಗಿರುವಾಗ ಪ್ರಸಕ್ತ ಮುಂಗಾರಿನ ಮಳೆ ಕೊರತೆಯಿಂದ ಗೋವಿನಜೋಳ ಇಳುವರಿ ಸಹಜವಾಗಿ ಕುಂಠಿತಗೊಳ್ಳುತ್ತದೆ. ಎಕರೆಗೆ ಕನಿಷ್ಠ 20ರಿಂದ 25ಸಾವಿರ ರೂ. ಖರ್ಚು ತಗಲುವ ಗೋವಿನ ಜೋಳದ ಇಳುವರಿ ಕುಂಠಿತವಾದರೆ ರೈತರು ಹಾಕಿದ ಬಂಡವಾಳ, ಶ್ರಮ ಹಾಗೂ ಸಮಯದ ಬೆಲೆಯನ್ನು ಯಾರು ತುಂಬಿ ಕೊಡಬೇಕು?

ಹಾವೇರಿ ಜಿಲ್ಲೆಯಲ್ಲಿ ಅಂದಾಜು 2,000 ಕೆರೆಕಟ್ಟೆಗಳಿವೆ ಎನ್ನಲಾಗುತ್ತಿದೆ. ಕಳೆದ ವರ್ಷದಿಂದ ಈಚೆಗೆ ಕೆರೆಕಟ್ಟೆ ತುಂಬಿ ಹಳ್ಳ ಕೊಳ್ಳ ಹರಿಯುವಂತಹ ಮಳೆಯೇ ಆಗಿಲ್ಲ. ಆದಕಾರಣ ಜಿಲ್ಲೆಯ ಬಹುತೇಕ ಕೆರೆಗಳು ಬತ್ತಿವೆ. ಬಹಳಷ್ಟು ಕೆರೆಗಳಲ್ಲಿ ಶೇ.10, ಇಲ್ಲವೇ 20ರಷ್ಟು ನೀರಿದೆ. ಕಳೆದ ವರ್ಷದಂತೆ ಈ ವರ್ಷವೂ ಹಿಂಗಾರು ಕೈ ಕೊಟ್ಟರೆ ಅಂತರ್ಜಲ ಮಟ್ಟ ಸಂಪೂರ್ಣ ಕುಸಿಯಲಿದೆ. ಬರುವ ಬೇಸಿಗೆಗೆ ಕುಡಿಯುವ ನೀರಿಗೂ ಪರದಾಡಬೇಕಾದ ಸ್ಥಿತಿ ನಿರ್ಮಾಣವಾಗಬಹುದಾದ ಸಾಧ್ಯತೆಗಳಿವೆ.

ಹಾವೇರಿ ಜಿಲ್ಲೆಯ ರೈತರು ಕಳೆದ ವರ್ಷದಿಂದಲೇ ಬರದಿಂದ ಕಂಗೆಟ್ಟಿದ್ದಾರೆ. ಕಳೆದ ವರ್ಷ ಗಣೇಶ ಚೌತಿಯ ನಂತರ ದೊಡ್ಡ ಮಳೆಯೇ ಆಗಿಲ್ಲ ಮತ್ತು ಹಿಂಗಾರು ಮಳೆ ಅಷ್ಟಕ್ಕಷ್ಟೆ ಎಂಬಂತಾಗಿದ್ದು, ಕಳೆದ ಐದಾರು ವರ್ಷಗಳಿಂದ ಜಿಲ್ಲೆಯ ರೈತರು ಬೆಳೆವಿಮೆ ಪರಿಹಾರದಿಂದಲೂ ವಂಚಿತರಾಗುತಿದ್ದಾರೆ. 2023ರಲ್ಲಿ ಅತಿವೃಷ್ಟಿ ಪರಿಣಾಮ ಶೇ.25ರಷ್ಟು ಬೆಳೆವಿಮೆ ಪರಿಹಾರ ನೀಡಿದ್ದು ಬಿಟ್ಟರೆ, 2020ರಿಂದೀಚೆಗೆ ಜಿಲ್ಲೆಯ ರೈತರಿಗೆ ಸರಿಯಾಗಿ ಬೆಳೆವಿಮೆ ಪರಿಹಾರವೇ ದೊರಕುತ್ತಿಲ್ಲ. ಸರ್ಕಾರ ಹಾಗೂ ಖಾಸಗಿ ವಿಮಾ ಕಂಪನಿಗಳು ಬೆಳೆವಿಮೆ ಪರಿಹಾರವನ್ನು ಯಾವ ಆಧಾರ ಅಥವಾ ಮಾನದಂಡಗಳನ್ನು ಅನುಸರಿಸಿ ನೀಡಬೇಕೆನ್ನುತ್ತಿವೆ ಎಂಬುದನ್ನಾದರೂ ಸಾರ್ವಜನಿಕಗೊಳಿಸಿದರೆ, ರೈತರು ವಿಮೆ ಕಂತು ತುಂಬುವುದನ್ನಾದರೂ ನಿಲ್ಲಿಸುತ್ತೇವೆ.

ಕಳೆದ ಒಂದೆರಡು ತಿಂಗಳಿನ ಅವಧಿಯಲ್ಲಿ ಹಾವೇರಿ ಮತ್ತು ರಟ್ಟಿಹಳ್ಳಿ ತಾಲೂಕುಗಳಲ್ಲಿ ಇಬ್ಬರು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಹೆಚ್ಚುತ್ತಿರುವ ಕೃಷಿ ವೆಚ್ಚ, ಕೃಷಿ ಉತ್ಪನ್ನಗಳಿಗೆ ಸಿಗದ ನ್ಯಾಯದ ಬೆಲೆ, ನಿರಂತರ ಇಳುವರಿ ಕುಸಿತಗಳಿಂದ ಜರ್ಜರಿತರಾಗಿರುವ ರೈತರು ಬದುಕುವುದೇ ದುಸ್ತರವಾಗಿರುವ ಈ ಕಾಲಘಟ್ಟದಲ್ಲಿ ಸರ್ಕಾರಗಳು ರೈತರ ನೆರವಿಗೆ ನಿಲ್ಲುವುದು ಇನ್ಯಾವಾಗ?

ಅಶಾಂತಿಯ ಕಣಿವೆಯಲ್ಲಿ ನಿಲ್ಲದ ಸಂಘರ್ಷ: ಮಣಿಪುರದ ಪ್ರಜಾಪ್ರಭುತ್ವಕ್ಕೆ ಸವಾಲಾದ ಜನಾಂಗೀಯ ಸಮರ

ಮುಂದಿನ ವರ್ಷ ಮಣಿಪುರದಲ್ಲಿ ವಿಧಾನಸಭಾ ಚುನಾವಣೆಗಳು ನಡೆಯಬೇಕಿದ್ದು, ಪ್ರಸ್ತುತ ಸನ್ನಿವೇಶದಲ್ಲಿ ಪ್ರಜಾಸತ್ತಾತ್ಮಕ ಪ್ರಕ್ರಿಯೆ ನಡೆಸುವುದು ದೊಡ್ಡ ಸವಾಲಾಗಿದೆ. ಮೈತೇಯಿ ಸಮುದಾಯವು ಕಣಿವೆ ಪ್ರದೇಶದಲ್ಲಿ ಬಹುಸಂಖ್ಯಾತರಾಗಿದ್ದರೆ, ಬೆಟ್ಟದ ಪ್ರದೇಶಗಳಲ್ಲಿ ಕುಕಿ ಮತ್ತು ನಾಗಾ ಸಮುದಾಯಗಳು ಹಂಚಿಕೆಯಾಗಿವೆ. ಹಿಂಸಾಚಾರದ ಕಾರಣದಿಂದ ಈ ಸಮುದಾಯಗಳ ನಡುವಿನ ಮುಕ್ತ ಸಂಚಾರ ಬಂದ್ ಆಗಿದೆ.



ಮಣಿಪುರ ರಾಜ್ಯವು ಕಳೆದೆರಡು ವರ್ಷಗಳಿಂದ ಜನಾಂಗೀಯ ಹಿಂಸಾಚಾರದ ಕಾವಿನಲ್ಲಿ ಬೇಯುತ್ತಿದೆ. ಪ್ರಸ್ತುತ ಪರಿಸ್ಥಿತಿ ಮತ್ತಷ್ಟು ಸಂಕೀರ್ಣ ರೂಪಕ್ಕೆ ತಿರುಗಿದೆ. ಆರಂಭದಲ್ಲಿ ಮೈತೇಯಿ () ಮತ್ತು ಕುಕಿ-ಜೋ (-) ಸಮುದಾಯಗಳ ನಡುವೆ ಈ ಹಿಂಸಾತ್ಮಕ ಸಂಘರ್ಷ ಸೀಮಿತವಾಗಿತ್ತು. ಆದರೆ ಈಗ ರಾಜ್ಯದ ಬೆಟ್ಟದ ಪ್ರದೇಶಗಳಲ್ಲಿ ವಾಸಿಸುವ ನಾಗಾ () ಮತ್ತು ಕುಕಿ ಸಮುದಾಯಗಳ ನಡುವೆಯೂ ಹೊಸ ಕಿಡಿ ಹೊತ್ತಿದೆ.

ಈ ಉದ್ವಿಗ್ನತೆಯ ಮಧ್ಯೆಯೇ, ರಾಜ್ಯದ ಉಪಮುಖ್ಯಮಂತ್ರಿ ಲೋಸಿ ಡಿಖೋ ಅವರ ''ನಾಗಾ-ಕುಕಿ ಹಿಂಸಾಚಾರ ಹೀಗೆಯೇ ಮುಂದುವರೆದರೆ ಮುಂಬರುವ ವಿಧಾನಸಭಾ ಚುನಾವಣೆಗಳನ್ನು ನಡೆಸುವುದು ಅತ್ಯಂತ ದುಸ್ತರವಾಗಲಿದೆ'' ಎಂಬ ಹೇಳಿಕೆಯು ಮಣಿಪುರದ ರಾಜಕೀಯ ಹಾಗೂ ಸಾಂವಿಧಾನಿಕ ಭವಿಷ್ಯದ ಕುರಿತು ತೀವ್ರ ಕಳವಳವನ್ನು ಹುಟ್ಟುಹಾಕಿದೆ.

ಮಣಿಪುರ ಸರ್ಕಾರದಲ್ಲಿ ಜಂಟಿಯಾಗಿ ಅಧಿಕಾರ ಹಂಚಿಕೊಂಡಿರುವ ನಾಗಾ ಶಾಸಕರು ಹಾಗೂ ಕುಕಿ ನಾಯಕರ ನಡುವಿನ ಭಿನ್ನಾಭಿಪ್ರಾಯ ಈಗ ಬಹಿರಂಗ ರಾಜಕೀಯ ಸಮರಕ್ಕೆ ದಾರಿ ಮಾಡಿಕೊಟ್ಟಿದೆ. ಇತ್ತೀಚೆಗೆ ಕಂಗ್‌ಪೋಕ್ಪಿ ಮತ್ತು ಇಂಫಾಲ್-ತಮೆಂಗ್‌ಲಾಂಗ್ ರಸ್ತೆಗಳಲ್ಲಿ ನಡೆದ ದಾಳಿಗಳಲ್ಲಿ ನಾಗಾ ಸಮುದಾಯದ ನಾಗರಿಕರು ಹತ್ಯೆಗೀಡಾದ ಘಟನೆಗಳ ನಂತರ, ನಾಗಾ ಶಾಸಕರು ಕೇಂದ್ರ ಗೃಹ ಸಚಿವರಿಗೆ ಪತ್ರ ಬರೆದು ತಮ್ಮ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಕುಕಿ ಸಶಸ್ತ್ರ ಗುಂಪುಗಳ ವಿರುದ್ಧ ಹಾಗೂ ಹತ್ಯೆಗಳಲ್ಲಿ ಭಾಗಿಯಾಗಿದ್ದಾರೆನ್ನಲಾದ ಕುಕಿ ನಾಯಕರ ವಿರುದ್ಧ ಕಠಿಣ ಕ್ರಮ ಕೈಗೊಳ್ಳದಿದ್ದರೆ ಸರ್ಕಾರಕ್ಕೆ ನೀಡುತ್ತಿರುವ ಬೆಂಬಲವನ್ನು ಹಿಂಪಡೆಯುವುದಾಗಿ ನಾಗಾ ನಾಯಕರು ಎಚ್ಚರಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಉಪಮುಖ್ಯಮಂತ್ರಿಯವರು ನೀಡಿದ ಹೇಳಿಕೆಯು ಕೇವಲ ಶಾಂತಿ ಪಾಲನೆಯ ಸವಾಲನ್ನು ಮಾತ್ರವಲ್ಲದೆ, ರಾಜಕೀಯ ಸ್ಥಿರತೆಯ ಮೇಲಿರುವ ಗಂಭೀರ ಬೆದರಿಕೆಯನ್ನು ಬಿಂಬಿಸುತ್ತದೆ.

2023ರ ಮಣಿಪುರದ ಭೀಕರ ಜನಾಂಗೀಯ ಹಿಂಸಾಚಾರ

ಮಣಿಪುರದಲ್ಲಿ 2023ರಲ್ಲಿ ಆರಂಭವಾದ ಜನಾಂಗೀಯ ಹಿಂಸಾಚಾರವು ರಾಜ್ಯದ ಇಬ್ಬಂದಿ ಸಮುದಾಯಗಳ ನಡುವಿನ ದೀರ್ಘಕಾಲದ ಉದ್ವಿಗ್ನತೆಯ ಪರಿಣಾಮ. ಮೈತೇಯಿ ಸಮುದಾಯದವರು ತಮಗೆ ಪರಿಶಿಷ್ಟ ಪಂಗಡ () ಸ್ಥಾನಮಾನ ನೀಡಬೇಕೆಂದು ಕೋರಿದ್ದರು. ಈ ಕುರಿತು ಪರಿಶೀಲಿಸುವಂತೆ ಮಣಿಪುರ ಹೈಕೋರ್ಟ್ ಸರ್ಕಾರಕ್ಕೆ ನಿರ್ದೇಶನ ನೀಡಿತು. ಹೈಕೋರ್ಟ್ ನಿರ್ದೇಶನವನ್ನು ವಿರೋಧಿಸಿ ಕುಕಿ ಸೇರಿದಂತೆ ಇತರ ಬುಡಕಟ್ಟು ಸಮುದಾಯಗಳು ಬುಡಕಟ್ಟು ಐಕ್ಯತಾ ಮೆರವಣಿಗೆ ಆಯೋಜಿಸಿದವು. ಮೈತೇಯಿ ಸಮುದಾಯಕ್ಕೆ ಸ್ಥಾನಮಾನ ಸಿಕ್ಕಿದರೆ ತಮ್ಮ ಹಕ್ಕುಗಳು ಮತ್ತು ಜಮೀನು ಕೈತಪ್ಪಬಹುದು ಎಂಬುದು ಕುಕಿ ಸಮುದಾಯದ ಆತಂಕ. ಅದಾಗಲೇ ಬೂದಿ ಮುಚ್ಚಿದ ಕೆಂಡದಂತಿದ್ದ ಪರಿಸ್ಥಿತಿಯು ಕೈಮೀರಿ ಹಿಂಸಾಚಾರ ಆರಂಭವಾಯಿತು.

2023ರ ಮೇ 3ರಂದು ಚುರಾಚಂದ್‌ಪುರ ಜಿಲ್ಲೆಯಲ್ಲಿ ನಡೆದ ಪ್ರತಿಭಟನಾ ಮೆರವಣಿಗೆಯ ವೇಳೆ ಮೈತೈ ಮತ್ತು ಕುಕಿ ಸಮುದಾಯಗಳ ನಡುವೆ ಗಲಭೆ ಆರಂಭವಾಯಿತು. ಈ ಹಿಂಸಾಚಾರವು ಶೀಘ್ರದಲ್ಲೇ ಇಡೀ ರಾಜ್ಯಕ್ಕೆ ಹರಡಿ, ಎರಡೂ ಕಡೆಯವರಿಂದ ಮನೆಗಳು, ಪ್ರಾರ್ಥನಾ ಮಂದಿರಗಳು, ಸರ್ಕಾರಿ ಆಸ್ತಿಪಾಸ್ತಿಗಳು ಹಾಗೂ ವಾಹನಗಳಿಗೆ ಬೆಂಕಿ ಹಚ್ಚಲಾಯಿತು. ಗಲಭೆಕೋರರು ಪೊಲೀಸ್ ಠಾಣೆಗಳಿಂದ ಅಪಾರ ಪ್ರಮಾಣದ ಶಸ್ತ್ರಾಸ್ತ್ರಗಳನ್ನು ದೋಚಿದ್ದರಿಂದ ಪರಿಸ್ಥಿತಿ ಮತ್ತಷ್ಟು ವಿಕೋಪಕ್ಕೆ ಹೋಯಿತು. ಬಿಜೆಪಿ ಸರ್ಕಾರಕ್ಕೆ ಈ ಸ್ಥಿತಿಯನ್ನು ನಿಯಂತ್ರಿಸಲು ಸಾಧ್ಯವಾಗದೆ ಇದ್ದಾಗ ಕೇಂದ್ರ ಸರ್ಕಾರವು ಪರಿಸ್ಥಿತಿಯನ್ನು ಹತೋಟಿಗೆ ತರಲು ಸೇನೆ, ಅರೆಸೈನಿಕ ಪಡೆಗಳನ್ನು (,) ನಿಯೋಜಿಸಿತು ಮತ್ತು ಕರ್ಫ್ಯೂ ಜಾರಿಗೊಳಿಸಿತು.

ಇವೆಲ್ಲವುದರ ನಡುವೆ ಮಣಿಪುರದ ಮುಖ್ಯಮಂತ್ರಿಯಾಗಿದ್ದ ಎನ್. ಬಿರೇನ್ ಸಿಂಗ್ ರಾಜೀನಾಮೆ ನೀಡಿದರು. ಅದಾದ ಬಳಿಕ ಬಿಜೆಪಿಗೆ ಸರ್ಕಾರ ರಚಿಸಲು ಸಾಧ್ಯವಾಗದೆ ಇದ್ದಾಗ 2025 ಫೆಬ್ರವರಿ 13ರಂದು ರಾಷ್ಟ್ರಪತಿ ಆಡಳಿತ ಜಾರಿಗೊಳಿಸಲಾಯಿತು. ವಿಧಾನಸಭಾ ಕಲಾಪಗಳನ್ನು ಅಮಾನತಿನಲ್ಲಿಡಲಾಗಿತ್ತು. ಈ ರಾಷ್ಟ್ರಪತಿ ಆಡಳಿತವು ಸುಮಾರು ಒಂದು ವರ್ಷದ ಅವಧಿಗೆ ಜಾರಿಯಲ್ಲಿತ್ತು. 2026ರ ಫೆಬ್ರವರಿ 4ರಂದು ಇದನ್ನು ಹಿಂಪಡೆಯಲಾಯಿತು. ಅದಾದ ಬಳಿಕ ಮತ್ತೆ ಬಿಜೆಪಿ ಸರ್ಕಾರ ರಚಿಸಿತು. ಇದಾಗುತ್ತಿದ್ದಂತೆ ನಾಗಾ ಮತ್ತು ಕುಕಿ ಸಮುದಾಯಗಳ ನಡುವೆಯೂ ಹಿಂಸಾಚಾರ ಆರಂಭವಾಗಿದೆ.

ನಾಗಾ-ಕುಕಿ ವೈಷಮ್ಯದ ಐತಿಹಾಸಿಕ ಹಿನ್ನೆಲೆ

ಮಣಿಪುರದಲ್ಲಿ ನಾಗಾ ಮತ್ತು ಕುಕಿ ಸಮುದಾಯಗಳ ನಡುವಿನ ಜನಾಂಗೀಯ ವೈಷಮ್ಯವು ನಿನ್ನೆ ಮೊನ್ನೆಯದ್ದಲ್ಲ; ಅದಕ್ಕೆ 1990ರ ದಶಕದ ಕಹಿ ಇತಿಹಾಸವಿದೆ. 1992-1995ರ ಅವಧಿಯಲ್ಲಿ ಜಮೀನು ಮತ್ತು ಪ್ರಾದೇಶಿಕ ಪ್ರಾಬಲ್ಯಕ್ಕಾಗಿ ನಡೆದ ನಾಗಾ-ಕುಕಿ ರಕ್ತಸಿಕ್ತ ಸಂಘರ್ಷದಲ್ಲಿ ನೂರಾರು ಜನರು ಜೀವ ಕಳೆದುಕೊಂಡಿದ್ದರು ಹಾಗೂ ಸಾವಿರಾರು ಕುಟುಂಬಗಳು ನಿರಾಶ್ರಿತರಾಗಿದ್ದವು.

ನಂತರದ ದಿನಗಳಲ್ಲಿ ತಾತ್ಕಾಲಿಕ ಶಾಂತಿ ನೆಲೆಸಿದರೂ, ಭೂಮಿ ಹಕ್ಕು, ಸಾಂಸ್ಕೃತಿಕ ಗುರುತು ಮತ್ತು ಹಿಲ್ ಏರಿಯಾಸ್ ಕೌನ್ಸಿಲ್ () ಅಧಿಕಾರ ವ್ಯಾಪ್ತಿಯ ವಿಷಯಗಳಲ್ಲಿ ಆಂತರಿಕ ಅಪನಂಬಿಕೆ ಉಳಿದುಕೊಂಡಿತ್ತು. 2023ರಿಂದ ಮೈತೇಯ್-ಕುಕಿ ನಡುವೆ ನಡೆಯುತ್ತಿದ್ದ ಹಿಂಸಾಚಾರವು ಇದೀಗ ನಾಗಾ-ಕುಕಿ ಪ್ರದೇಶಗಳಿಗೂ ವಿಸ್ತರಿಸುತ್ತಿರುವುದು 90ರ ದಶಕದ ಆ ಕರಾಳ ದಿನಗಳನ್ನು ನೆನಪಿಸುವಂತೆ ಮಾಡಿದೆ.

ಚುನಾವಣೆ ನಡೆಸುವುದು ದುಸ್ತರ ಏಕೆ?

ಮುಂದಿನ ವರ್ಷ ಮಣಿಪುರದಲ್ಲಿ ವಿಧಾನಸಭಾ ಚುನಾವಣೆಗಳು ನಡೆಯಬೇಕಿದ್ದು, ಪ್ರಸ್ತುತ ಸನ್ನಿವೇಶದಲ್ಲಿ ಪ್ರಜಾಸತ್ತಾತ್ಮಕ ಪ್ರಕ್ರಿಯೆ ನಡೆಸುವುದು ದೊಡ್ಡ ಸವಾಲಾಗಿದೆ. ಮೈತೇಯಿ ಸಮುದಾಯವು ಕಣಿವೆ ಪ್ರದೇಶದಲ್ಲಿ ಬಹುಸಂಖ್ಯಾತರಾಗಿದ್ದರೆ, ಬೆಟ್ಟದ ಪ್ರದೇಶಗಳಲ್ಲಿ ಕುಕಿ ಮತ್ತು ನಾಗಾ ಸಮುದಾಯಗಳು ಹಂಚಿಕೆಯಾಗಿವೆ. ಹಿಂಸಾಚಾರದ ಕಾರಣದಿಂದ ಈ ಸಮುದಾಯಗಳ ನಡುವಿನ ಮುಕ್ತ ಸಂಚಾರ ಬಂದ್ ಆಗಿದೆ.

ಸಂಘರ್ಷದಿಂದಾಗಿ ಲಕ್ಷಾಂತರ ಜನರು ತಮ್ಮ ಸ್ವಂತ ಮನೆಗಳನ್ನು ತೊರೆದು ಪರಿಹಾರ ಶಿಬಿರಗಳಲ್ಲಿ ವಾಸಿಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಹಾಗೂ ಮತದಾನ ಪ್ರಕ್ರಿಯೆ ನಿರ್ವಹಿಸುವುದು ಕಠಿಣ. ಪ್ರದೇಶದಲ್ಲಿ ವಿವಿಧ ಜನಾಂಗೀಯ ಸಶಸ್ತ್ರ ಪಡೆಗಳು ಸಕ್ರಿಯವಾಗಿದ್ದು, ಸಾರ್ವಜನಿಕರಲ್ಲಿ ಭೀತಿಯ ವಾತಾವರಣ ಸೃಷ್ಟಿಯಾಗಿದೆ. ಭದ್ರತಾ ಪಡೆಗಳ ನಿಯೋಜನೆ ಮತ್ತು ಮತಗಟ್ಟೆಗಳ ರಕ್ಷಣೆ ದೊಡ್ಡ ಸಾಹಸವಾಗಲಿದೆ. ಬಿಜೆಪಿ ಸರ್ಕಾರ ಮತ್ತು ವಿವಿಧ ಜನಾಂಗೀಯ ಗುಂಪುಗಳ ನಡುವಿನ ಪರಸ್ಪರ ನಂಬಿಕೆಯ ಅಭಾವವು ಚುನಾವಣಾ ಪ್ರಕ್ರಿಯೆಯಲ್ಲಿ ಭಾಗವಹಿಸಲು ಜನರನ್ನು ಹಿಂದೇಟು ಹಾಕುವಂತೆ ಮಾಡಿದೆ.

ಉಪಮುಖ್ಯಮಂತ್ರಿಯವರ ಎಚ್ಚರಿಕೆಯು ರಾಜ್ಯದಲ್ಲಿ ತಕ್ಷಣವೇ ಶಾಂತಿ ಮರುಸ್ಥಾಪನೆಯ ಅಗತ್ಯವನ್ನು ಒತ್ತಿಹೇಳುತ್ತದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕೇವಲ ಮಿಲಿಟರಿ ಬಲದಿಂದ ಸನ್ನಿವೇಶವನ್ನು ನಿಯಂತ್ರಿಸಲು ಸಾಧ್ಯವಿಲ್ಲ. ಎಲ್ಲಾ ಸಮುದಾಯಗಳ (ಮೈತೇಯಿ, ನಾಗಾ, ಕುಕಿ) ನಾಯಕರನ್ನು ಒಂದೇ ವೇದಿಕೆಗೆ ತಂದು ಸುದೀರ್ಘ ಶಾಂತಿ ಮಾತುಕತೆ ನಡೆಸಬೇಕಿದೆ.

ಆಂತರಿಕವಾಗಿ ಸೃಷ್ಟಿಯಾಗಿರುವ ಗಡಿಗಳನ್ನು ತೆರವುಗೊಳಿಸಿ, ನಿರಾಶ್ರಿತರಿಗೆ ಪುನರ್ವಸತಿ ಕಲ್ಪಿಸುವುದು ಮತ್ತು ನಾಗರಿಕರಲ್ಲಿ ನಂಬಿಕೆಯನ್ನು ಮೂಡಿಸುವುದು ಪ್ರಜಾಪ್ರಭುತ್ವವನ್ನು ಉಳಿಸಿಕೊಳ್ಳಲು ಇರುವ ಏಕೈಕ ಮಾರ್ಗವಾಗಿದೆ. ಮಣಿಪುರದಲ್ಲಿ ಪ್ರಜಾಸತ್ತಾತ್ಮಕ ಮೌಲ್ಯಗಳನ್ನು ಮತ್ತು ಸಾಂವಿಧಾನಿಕ ಪ್ರಕ್ರಿಯೆಯನ್ನು ಎತ್ತಿಹಿಡಿಯಬೇಕಾದರೆ, ರಾಜಕೀಯ ಲಾಭ-ನಷ್ಟಗಳ ಗಣನೆಯನ್ನು ಬದಿಗೊತ್ತಿ, ಜನಾಂಗೀಯ ಶಾಂತಿಗೆ ಮೊದಲ ಆದ್ಯತೆ ನೀಡಬೇಕಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR